ಸಂಪುಟ : 11 ಸಂಚಿಕೆ: 85 ಪುಟ : 4+2 ಬೆಲೆ: 3.00 ರವಿವಾರ ಮೇ 03 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 11 Issue : 85 Pages : 4+2 Price : 3.00 Sunday May 3 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಹೊಸ ವಿದ್ಯುತ್ ವಿತರಣಾ ಕೇಂದ್ರಕ್ಕೆ ಇಂದು ಶಂಕುಸ್ಥಾಪನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂಧನ ಇಲಾಖೆ ಹಾಗೂ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತದ ವತಿಯಿಂದ ಗದಗ ತಾಲೂಕಿನ ಮುಳಗುಂದ ಗ್ರಾಮದಲ್ಲಿ ಹೊಸದಾಗಿ ನಿರ್ಮಿಸಲಾಗುವ 2ಥ20 ಎಂ.ವಿ.ಎ., 110/11 ಕೆ.ವಿ. ಸಾಮರ್ಥ್ಯದ ವಿದ್ಯುತ್ ವಿತರಣಾ ಕೇಂದ್ರದ ಶಂಕುಸ್ಥಾಪನೆ ಸಮಾರಂಭವನ್ನು ಮೇ 3ರಂದು ಸಂಜೆ 5 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹಾಗೂ ಇಂಧನ ಸಚಿವ ಕೆ.ಜೆ. ಜಾರ್ಜ್ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹು.ವಿ.ಸ.ಕಂ.ನಿ ಅಧ್ಯಕ್ಷರು ಹಾಗೂ ಶಿಗ್ಗಾಂವ-ಸವಣೂರು ಮಾಜಿ ಶಾಸಕ ಸೈಯದ್ ಅಜ್ಜಂಪೀರ್ ಎಸ್. ಖಾದ್ರಿ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಹಾಗೂ ಪ್ರದೀಪ್ ಶೆಟ್ಟರ್, ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಭಾಗವಹಿಸಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ಇಂಧನ ಇಲಾಖೆ ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತ, ಯೋಜನೆ ಕಾರ್ಯಕ್ರಮ ಸಂಯೋಜನೆ ಹಾಗೂ ಸಾಂಖ್ಯಿಕ ಇಲಾಖೆ ಕಾರ್ಯದರ್ಶಿ ಮತ್ತು ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೆಂಕಟೇಶ್, ಬೆಂಗಳೂರು ಕವಿಪ್ರನಿನಿ ವ್ಯವಸ್ಥಾಪಕ ನಿರ್ದೇಶಕ ಡಾ. ವಿ. ರಾಮ್ ಪ್ರಸಾತ್ ಮನೋಹರ್, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಹಾಗೂ ಹುಬ್ಬಳ್ಳಿ ಹೆಸ್ಕಾಂ ವ್ಯವಸ್ಥಾಪಕ ನಿರ್ದೇಶಕಿ ವೈಶಾಲಿ ಎಂ.ಎಲ್ ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಗದಗ ತಹಶೀಲ್ದಾರರು, ಮುಳಗುಂದ ಪಟ್ಟಣ ಪಂಚಾಯತ್ ಆಡಳಿತಾಧಿಕಾರಿಗಳು, ಬೆಂಗಳೂರು ಕವಿಪ್ರನಿನಿ ನಿರ್ದೇಶಕರು ಗಿರಿಧರ ಕುಲಕರ್ಣಿ ಮತ್ತು ವಿಶ್ವನಾಥ ನಾಯ್ಕ್, ಹುಬ್ಬಳ್ಳಿ ಹೆಸ್ಕಾಂ ತಾಂತ್ರಿಕ ನಿರ್ದೇಶಕ ಎಸ್. ಜಗದೀಶ್ ಸೇರಿದಂತೆ ವಿವಿಧ ಅಧಿಕಾರಿಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿರಲಿದ್ದಾರೆ. ಕಾರ್ಯಕ್ರಮಕ್ಕೆ ಎಲ್ಲರಿಗೂ ಸ್ವಾಗತ ಕೋರಲಾಗಿದೆ.

---

**ಒಂದು ವರ್ಷದಲ್ಲಿ 100ಕ್ಕೂ ಹೆಚ್ಚು ದೇವಾಲಯ-ಬಾವಿಗಳ ಅನಾವರಣ ಗುರಿ ರೂ. 10.16 ಕೋಟಿ ಅನುದಾನ ಬಿಡುಗಡೆ**

# ಲಕ್ಕುಂಡಿ ವೈಭವ ಅನಾವರಣಕ್ಕೆ ಸರ್ಕಾರದ ಮಹಾಯೋಜನೆ

■ ವಿಜಯಸಾಕ್ಷಿ ಸುದ್ದಿ, ಗದಗ

ಐತಿಹಾಸಿಕ ಲಕ್ಕುಂಡಿಯನ್ನು ರಾಷ್ಟ್ರಮಟ್ಟದಲ್ಲಿ ಅಗ್ರ ಪುರಾತತ್ವ ಕೇಂದ್ರವನ್ನಾಗಿ ರೂಪಿಸಲು ರಾಜ್ಯ ಸರ್ಕಾರ ಸಮಗ್ರ ಯೋಜನೆ ರೂಪಿಸುತ್ತಿದ್ದು, ಮುಂದಿನ ಒಂದು ವರ್ಷದಲ್ಲಿ 100ಕ್ಕೂ ಹೆಚ್ಚು ದೇವಾಲಯಗಳು ಮತ್ತು ಬಾವಿಗಳನ್ನು ಅನಾವರಣಗೊಳಿಸುವ ಗುರಿ ಹೊಂದಲಾಗಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ ಹೇಳಿದರು.

ಜಿಲ್ಲೆಯ ಲಕ್ಕುಂಡಿಯಲ್ಲಿ ಶನಿವಾರ ಏರ್ಪಡಿಸಿದ್ದ 6 ಸ್ಮಾರಕಗಳ ಸಂರಕ್ಷಣೆ ಮತ್ತು ಅಭಿವೃದ್ಧಿ ಕಾಮಗಾರಿ ಶಿಲಾನ್ಯಾಸ, ದಶ ಬಾವಿ, ದಶ ದೇವಾಲಯ ಅನಾವರಣ ಹಾಗೂ ಪ್ರಾಚ್ಯವಶೇಷಗಳ ಅನ್ವೇಷಣಾ ಸಪ್ತಾಹ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಈಗಾಗಲೇ ಪಂಚ ದೇವಾಲಯ ಮತ್ತು ಪಂಚ ಬಾವಿಗಳ ಅನಾವರಣ ಯಶಸ್ವಿಯಾಗಿ ನಡೆದಿದೆ. ಇದೀಗ 10 ಬಾವಿ ಮತ್ತು ದೇವಾಲಯಗಳನ್ನು ಸಾರ್ವಜನಿಕರಿಗೆ ಪರಿಚಯಿಸಲಾಗಿದ್ದು, ಇದರೊಂದಿಗೆ ಪುರಾತತ್ವ ಸ್ಮಾರಕಗಳ ಸಂಖ್ಯೆ 70ರ ಗಡಿ ದಾಟಿದೆ ಎಂದು ಹೇಳಿದರು.






ಲಕ್ಕುಂಡಿಯ ಅನೇಕ ದೇವಾಲಯಗಳು ಮತ್ತು ಬಾವಿಗಳು ಕಾಲಕ್ರಮೇಣ ನಿರ್ಲಕ್ಷ್ಯದಿಂದ ತಮ್ಮ ಗುರುತನ್ನು ಕಳೆದುಕೊಂಡಿದ್ದವು. ಅವುಗಳನ್ನು ಪತ್ತೆಹಚ್ಚಿ ಪುನರುಜ್ಜೀವನಗೊಳಿಸುವ ಕಾರ್ಯವನ್ನು ಸರ್ಕಾರ ಹಾಗೂ ಸ್ಥಳೀಯರ ಸಹಕಾರದಿಂದ ಯಶಸ್ವಿಯಾಗಿ ಕೈಗೊಳ್ಳಲಾಗಿದೆ. 2026ರೊಳಗೆ ಕನಿಷ್ಠ 50 ಬಾವಿ ಮತ್ತು 50 ದೇವಾಲಯಗಳನ್ನು ಅನಾವರಣಗೊಳಿಸಿ 100ರ ಗಡಿಯನ್ನು ದಾಟುವ ಗುರಿ ಹೊಂದಲಾಗಿದೆ. ಇದಕ್ಕೆ ಲಕ್ಕುಂಡಿ ಜನರ ಸಹಕಾರ ಅತ್ಯಗತ್ಯ ಎಂದು ಮನವಿ ಮಾಡಿದರು.

ಲಕ್ಕುಂಡಿಯಲ್ಲಿ ದೇಶದಲ್ಲೇ ಅತ್ಯುತ್ತಮ ಬಯಲು ವಸ್ತು ಸಂಗ್ರಹಾಲಯ ಸ್ಥಾಪಿಸಲು ಯೋಜನೆ ರೂಪಿಸಲಾಗಿದ್ದು, ಈಗಾಗಲೇ 1200ಕ್ಕೂ ಹೆಚ್ಚು ಪ್ರಾಚ್ಯವಶೇಷಗಳಿಗೆ ಸಂಖ್ಯೆ ನೀಡಲಾಗಿದೆ. ಶೀಘ್ರದಲ್ಲೇ ಈ ಸಂಖ್ಯೆ 2000 ದಾಟುವ ನಿರೀಕ್ಷೆಯಿದೆ ಎಂದು ಸಚಿವರು ತಿಳಿಸಿದರು.

▸▸ 3ನೇ ಪುಟಕ್ಕೆ

> "ಲಕ್ಕುಂಡಿಯನ್ನು ದೇಶದ ಅಗ್ರ ಪುರಾತತ್ವ ಕೇಂದ್ರವನ್ನಾಗಿ ರೂಪಿಸಿ ಜಾಗತಿಕ ಮಟ್ಟದಲ್ಲಿ ಗುರುತಿಸುವುದು ನಮ್ಮ ಗುರಿ."
> **– ಎಚ್.ಕೆ. ಪಾಟೀಲ, ಜಿಲ್ಲಾ ಉಸ್ತುವಾರಿ ಸಚಿವ**

### ಗ್ರಾಮಸ್ಥರ ಪ್ರಾಮಾಣಿಕತೆ ಶ್ಲಾಘನೀಯ

ಬಂಗಾರದ ನಾಣ್ಯಗಳಂತಹ ಅಮೂಲ್ಯ ವಸ್ತುಗಳನ್ನು ಸಹ ಸರ್ಕಾರಕ್ಕೆ ಒಪ್ಪಿಸುತ್ತಿರುವ ಲಕ್ಕುಂಡಿ ಜನರ ಪ್ರಾಮಾಣಿಕತೆ ಅಪರೂಪದ ಉದಾಹರಣೆ ಎಂದು ಸಚಿವರು ಶ್ಲಾಘಿಸಿದರು. ಇತ್ತೀಚೆಗೆ ಪತ್ತೆಯಾದ ಬಂಗಾರದ ಮೌಲ್ಯವನ್ನು ತಜ್ಞರು ಸುಮಾರು ರೂ. 8 ಕೋಟಿ ಎಂದು ಅಂದಾಜಿಸಿದ್ದಾರೆ.

### ರೂ. 0.16 ಕೋಟಿ ಅನುದಾನ ಬಿಡುಗಡೆ

ಸ್ಮಾರಕಗಳ ಅಭಿವೃದ್ಧಿಗೆ ರೂ. 10.16 ಕೋಟಿ ಅನುದಾನ ಬಿಡುಗಡೆ ಮಾಡಲಾಗಿದೆ.

1. ಬಸವೇಶ್ವರ ದೇವಾಲಯ (ಹಾಲಗುಂಡಿ) ರೂ 1.58 ಕೋಟಿ
2. ಕನ್ನೇರ ಬಾವಿ ರೂ 1.70 ಕೋಟಿ
3. ಮಲ್ಲಿಕಾರ್ಜುನ ದೇವಾಲಯ ರೂ 1.67 ಕೋಟಿ
4. ವಿರೂಪಾಕ್ಷೇಶ್ವರ ದೇವಾಲಯ ರೂ. 1.81 ಕೋಟಿ
5. ಚಂದ್ರಮೌಳೇಶ್ವರ ದೇವಾಲಯ ರೂ. 1.80 ಕೋಟಿ
6. ಕಲ್ಮಠ ದ್ವಾರಬಾಗಿಲು ಮತ್ತು ಬಾವಿ ರೂ.1.50 ಕೋಟಿ

---

**ಸೆಪ್ಟೆಂಬರ್, ಅಕ್ಟೋಬರ್‌ನಲ್ಲಿ ಆಯೋಜನೆಗೆ ಆಸಕ್ತಿ – ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2 ಸಮಾರೋಪದಲ್ಲಿ ಸಚಿವ ಎಚ್.ಕೆ. ಪಾಟೀಲ ಹೇಳಿಕೆ**

# ಗದುಗಿನಲ್ಲಿ ಕಾಮನವೆಲ್ತ್ ವಾಲಿಬಾಲ್ ಚಾಂಪಿಯನ್‌ಶಿಪ್‌ಗೆ ಸಿದ್ಧತೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕಳೆದ 18 ದಿನಗಳ ಕಾಲ ನಡೆದ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2ರ ಕ್ರಿಕೆಟ್ ಪಂದ್ಯಾವಳಿ ಮನರಂಜನೆ ಮಾತ್ರವಲ್ಲ, ಕ್ರಿಕೆಟ್ ಆಟದಲ್ಲಿ ಗದುಗಿನ ಆಟಗಾರರು ಯಾವ ರೀತಿ ನೈಪುಣ್ಯತೆ ಹೊಂದಿದ್ದಾರೆಂದು ತೋರಿಸಿದ್ದೀರಿ ಎಂದು ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2ರ ಚಾಂಪಿಯನ್ ಎಲೈಟ್ ಇಲೆವೆನ್ ತಂಡಕ್ಕೆ ಟ್ರೋಫಿ ವಿತರಿಸಿ ಮಾತನಾಡಿದ ಅವರು, ಒಂದೆಡೆ ಐಪಿಎಲ್ ಪಂದ್ಯಾವಳಿ ಅಬ್ಬರದಿಂದ ನಡೆಯುತ್ತಿದ್ದರೆ, ಗದುಗಿನಲ್ಲಿ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಪಂದ್ಯಾವಳಿ ನಡೆಯುತ್ತಿದ್ದರೂ ಗದುಗಿನ ಆಟಗಾರರು ಯಾವುದಕ್ಕೂ ಕಡಿಮೆ ಏನಿಲ್ಲ ಎನಿಸುತ್ತಿತ್ತು ಎಂದು ಹೇಳಿದರು.




ಪಂದ್ಯಾವಳಿಯಲ್ಲಿ ಗದುಗಿನ ಆಟಗಾರರು ಬಹಳ ಉತ್ತಮ ದರ್ಜೆಯ ಆಟವನ್ನು ಪ್ರದರ್ಶನ ಮಾಡಿದ್ದು, ಖ್ಯಾತ ಕ್ರಿಕೆಟಿಗ ಸುನಿಲ್ ಜೋಶಿ ಅವರು ಕೂಡ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ ಎಂದು ಹೇಳಿದರು.

ಈಗಾಗಲೇ 2030ರ ವೇಳೆಗೆ ಗದುಗಿನಲ್ಲಿ ರಣಜಿ ಪಂದ್ಯ ನಡೆಯಬೇಕು ಎನ್ನುವ ಸಂಕಲ್ಪ ಮಾಡಿದ್ದು, ಅದನ್ನು ಮತ್ತಷ್ಟು ಕಾರ್ಯಗತಗೊಳಿಸಲಾಗುವುದು ಎಂದು ಭರವಸೆ ನೀಡಿದರು.

ಗದಗ ಜಿಲ್ಲೆಯು ಕ್ರೀಡಾ ನಗರವಾಗಲು ಸ್ವಲ್ಪ ಹತ್ತಿರದಲ್ಲಿದ್ದು, ಮುಂದಿನ ದಿನಗಳಲ್ಲಿ ಕ್ರೀಡಾನಗರವನ್ನಾಗಿಸೋಣ. ಸೂಕ್ತ ತರಬೇತಿಗಾಗಿ ಸಿದ್ಧತೆ ಮಾಡಿಕೊಳ್ಳೋಣ ಎಂದರು.

ಮುಂದಿನ ಸೆಪ್ಟೆಂಬರ್, ಅಕ್ಟೋಬರ್‌ನಲ್ಲಿ ಕಾಮನವೆಲ್ತ್ ದೇಶಗಳ ವಾಲಿಬಾಲ್ ಚಾಂಪಿಯನ್‌ಶಿಪ್ ನಡೆಸಲು ರಾಷ್ಟ್ರೀಯ ವಾಲಿಬಾಲ್ ಸಂಸ್ಥೆ ಇಚ್ಛಿಸಿದ್ದು, ನಿಮ್ಮೆಲ್ಲರ ಇಚ್ಛಾಶಕ್ತಿಯಿಂದ ನಡೆಯುವಂತಾಗಲಿ ಎಂದು ಹಾರೈಸಿದರು.

ರಾಜ್ಯ ವಿಕೇಂದ್ರಿಕಾರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ. ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್‌ನ ಸಂಘಟಿಕರಾದ ಕೃಷ್ಣಗೌಡ ಎಚ್. ಪಾಟೀಲ, ಸಚಿನ್ ಪಾಟೀಲ, ಸರ್ಫರಾಜ್ ಶೇಖ್, ಜಿಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಮಿಥುನ್ ಪಾಟೀಲ, ಅಕ್ಷಯ ಪಾಟೀಲ, ಅಶೋಕ ಮಂದಾಲಿ ಸೇರಿ 20 ತಂಡಗಳ ಮಾಲೀಕರು, ಕ್ರಿಕೆಟ್ ಅಭಿಮಾನಿಗಳು ಪಾಲ್ಗೊಂಡಿದ್ದರು.

---

***ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2-ಫೈನಲ್ ಪಂದ್ಯಕ್ಕೆ ಕಿಕ್ಕಿರಿದು ಸೇರಿದ ಅಭಿಮಾನಿಗಳು 7 ವಿಕೆಟ್‌ಗಳಿಂದ ಸ್ಟ್ರೈಕರ್ಸ್ ವಿರುದ್ಧ ಜಯ**

## ಚಾಂಪಿಯನ್ ಪಟ್ಟ ಅಲಂಕರಿಸಿದ ಎಲೈಟ್ ಇಲೆವೆನ್




■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಕಳೆದ 20 ದಿನಗಳಿಂದ ಕ್ರಿಕೆಟ್ ಅಭಿಮಾನಿಗಳನ್ನು ರಂಜಿಸಿದ್ದ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಜನ್-2ರ ಪಂದ್ಯಾವಳಿಯಲ್ಲಿ ಎಲೈಟ್ ಇಲೆವೆನ್ ತಂಡ 7 ವಿಕೆಟ್ ಅಂತರದಲ್ಲಿ ಗೆಲುವು ಸಾಧಿಸಿ ಚಾಂಪಿಯನ್ ಪಟ್ಟ ಅಲಂಕರಿಸಿತು. ಎದುರಾಳಿ ಸ್ಟ್ರೈಕರ್ಸ್ ತಂಡ ರನ್ನರ್ ಅಪ್‌ಗೆ ತೃಪ್ತಿಪಟ್ಟಿತು.

ಫೈನಲ್ ಪಂದ್ಯದಲ್ಲಿ ಟಾಸ್ ಗೆದ್ದು ಬ್ಯಾಟಿಂಗ್ ಆಯ್ದುಕೊಂಡ ಸ್ಟ್ರೈಕರ್ಸ್ ತಂಡ ಮೊದಲ ವಿಕೆಟ್ ನಷ್ಟಕ್ಕೆ 6 ಓವರ್‌ಗಳಲ್ಲಿ 48 ರನ್ ಗಳಿಸಿದರೂ, ನಿಗದಿತ 10 ಓವರ್‌ಗಳಲ್ಲಿ 5 ವಿಕೆಟ್ ನಷ್ಟಕ್ಕೆ 72 ರನ್ ಗಳಿಸಲಷ್ಟೇ ಶಕ್ತವಾಯಿತು.

ಸ್ಟ್ರೈಕರ್ಸ್ ತಂಡದ ಪರವಾಗಿ ನಾಯಕ ಫಯಾಜ್ 18 ಎಸೆತಗಳಲ್ಲಿ 12 ರನ್ ಗಳಿಸಿದರೆ, ತಯ್ಯಬ್ 21 ಎಸೆತಗಳಲ್ಲಿ 5 ಫೋರ್ ಹಾಗೂ 1 ಸಿಕ್ಸರ್ ಸಹಿತ 36 ರನ್ ಗಳಿಸಿದರು. ನಂತರ ಬಂದ ಬ್ಯಾಟ್ಸ್‌ಮನ್‌ಗಳಾದ ಅಲ್ತಾಮಾಶ್ 2, ಜಗದೀಶ 1, ಚನ್ನಪ್ಪ 4, ರಿಯಾಜ್ 1 ಹಾಗೂ ಆರೀಫ್ 2 ರನ್ ಗಳಿಸಿದರು.

ಎಲೈಟ್ ಇಲೆವೆನ್ ತಂಡದ ಪರವಾಗಿ ನಿಹಾಲ್ ಆಕಾಶ್ 2 ಓವರ್‌ಗಳಲ್ಲಿ 13 ರನ್ ನೀಡಿ 2 ವಿಕೆಟ್ ಪಡೆದರೆ, ಶಿವು 2 ಓವರ್‌ಗಳಲ್ಲಿ ಮೇಡನ್ ಸಹಿತ ಕೇವಲ 3 ರನ್ ನೀಡಿ 2 ವಿಕೆಟ್ ಪಡೆದು ಮಿಂಚಿದರು.

ಇದಕ್ಕುತ್ತರವಾಗಿ ಬ್ಯಾಟಿಂಗ್‌ಗೆ ಇಳಿದ ಎಲೈಟ್ ಇಲೆವೆನ್ ತಂಡಕ್ಕೆ ಆರಂಭಿಕ ಬ್ಯಾಟ್ಸ್‌ಮನ್ ವಿಜಯ ಬಾರಕೇರ್ 21 ಎಸೆತಗಳಲ್ಲಿ 3 ಫೋರ್ ಸಹಿತ 30 ರನ್ ಗಳಿಸಿ ಉತ್ತಮ ಆರಂಭ ಒದಗಿಸಿದರು.

▸▸ 3ನೇ ಪುಟಕ್ಕೆ

---

**ಮೂಲಭೂತ ಸೌಲಭ್ಯಗಳ ಕೊರತೆಗೆ ಆಕ್ರೋಶ : ಗದಗ-ಕೃಷ್ಣಾವರ ರೈಲು ಜಾರಿಗೆ ಒತ್ತಾಯ**

# ನರೇಗಲ್ಲ ಸಮಸ್ಯೆಗಳಿಗೆ ಸಂವಾದವೇ ಪರಿಹಾರ

■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪಟ್ಟಣದ ಸಂತೆ ಬಜಾರ್‌ನ ಗಣೇಶ ಗುಡಿಯಲ್ಲಿ ಶುಕ್ರವಾರ ಸಂಜೆ ನಡೆದ ಗ್ರಾಮಸ್ಥರ ಸಭೆಯಲ್ಲಿ ಪಟ್ಟಣದ ಮೂಲಭೂತ ಸೌಲಭ್ಯಗಳನ್ನು ಪಡೆಯಲು ಶಾಸಕ ಹಾಗೂ ಸಂಸದರೊಂದಿಗೆ ಸಂವಾದ ನಡೆಸಲು ನಿರ್ಧರಿಸಲಾಯಿತು.

ಗದಗ-ಕೃಷ್ಣಾವರ ರೈಲನ್ನು ಜಾರಿಗೊಳಿಸುವಂತೆ ಆಗ್ರಹಿಸಿ ಗದಗ-ವಾಡಿ ಹೋರಾಟ ಸಮಿತಿಯ ಆಶ್ರಯದಲ್ಲಿ ನಡೆದ ಸಭೆಯಲ್ಲಿ ಈ ಮಹತ್ವದ ನಿರ್ಧಾರ ಕೈಗೊಳ್ಳಲಾಯಿತು.

ಮೊದಲು ರೋಣ ತಾಲೂಕಿನಲ್ಲಿದ್ದು, ಈಗ ಗಜೇಂದ್ರಗಡ ತಾಲೂಕಿನಲ್ಲಿರುವ ನರೇಗಲ್ಲ ಪಟ್ಟಣವು ಅಭಿವೃದ್ಧಿಯ ದೃಷ್ಟಿಯಿಂದ ಹಿಂದುಳಿದಿರುವುದನ್ನು ಸಭೆಯಲ್ಲಿ ಎಲ್ಲರೂ ಒಕ್ಕೊರಲಿನಿಂದ ವ್ಯಕ್ತಪಡಿಸಿದರು. ಹಾಲಕೆರೆಯ ಶ್ರೀ ಅನ್ನದಾನ ಮಹಾಸ್ವಾಮಿಗಳಿಂದ ಶಿಕ್ಷಣ ಕ್ಷೇತ್ರದಲ್ಲಿ ಕೆಲವು ಮಟ್ಟದ ಅಭಿವೃದ್ಧಿ ಕಂಡಿದ್ದರೂ, ಉಳಿದ ಎಲ್ಲಾ ಕ್ಷೇತ್ರಗಳಲ್ಲಿ ಪಟ್ಟಣ ಹಿಂದುಳಿದಿರುವುದನ್ನು ಖಂಡಿಸಿದರು.

ಹೋರಾಟ ಸಮಿತಿಯ ಸದಸ್ಯ ಡಾ. ಆರ್.ಕೆ. ಗಚ್ಚಿನಮಠ ಪ್ರಾಸ್ತಾವಿಕವಾಗಿ ಮಾತನಾಡಿ, ಪಟ್ಟಣಕ್ಕೆ ದೊರಕಬೇಕಿದ್ದ ಸರಕಾರಿ ಸೌಲಭ್ಯಗಳನ್ನು ಹೇಗೆ ಕಳೆದುಕೊಂಡೆವು ಹಾಗೂ ಅದಕ್ಕೆ ನಮ್ಮ ನಿರ್ಲಕ್ಷ್ಯವೇ ಕಾರಣವಾಯಿತು ಎಂಬುದನ್ನು ವಿವರಿಸಿದರು.

ಇನ್ನೋರ್ವ ಸದಸ್ಯ ಅಶೋಕ ಬೇವಿನಕಟ್ಟಿ ಮಾತನಾಡಿ, ಗದಗ-ವಾಡಿ ರೈಲಿಗಾಗಿ ಹೋರಾಟ ಸಮಿತಿಯ ಕ್ರಮಗಳನ್ನು ವಿವರಿಸಿದರು. ನರೇಗಲ್ಲ ಬಂದ್‌ಗೆ ಜನರಿಂದ ಉತ್ತಮ ಸ್ಪಂದನೆ ದೊರಕಿದರೂ, ಹೋರಾಟ ಮುಂದುವರಿದಿದ್ದರೆ ರೈಲು ಯೋಜನೆ ಸಾಧಿಸಲು ಸಾಧ್ಯವಾಗುತ್ತಿತ್ತೋ ಎಂಬ ಅಭಿಪ್ರಾಯ ವ್ಯಕ್ತಪಡಿಸಿದರು.



### ಪ್ರಮುಖ ಬೇಡಿಕೆಗಳು

1. ಗದಗ-ಕೃಷ್ಣಾವರ ರೈಲು ಜಾರಿಗೆ ಒತ್ತಾಯ
2. ಹಾಳಾದ ರಸ್ತೆಗಳಿಗೆ ತುರ್ತು ದುರಸ್ತಿ
3. ಸಬ್‌ರಜಿಸ್ಟ್ರಾರ್ ಕಚೇರಿ ಸೇವೆ ವಿಸ್ತರಣೆ
4. ನೆಮ್ಮದಿ ಕೇಂದ್ರ ಸ್ಥಳಾಂತರಕ್ಕೆ ವಿರೋಧ

ಮುಖಂಡ ಬಸವರಾಜ ವಂಕಲಕುಂಟಿ ಮಾತನಾಡಿ, ಪಟ್ಟಣಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಗಳು ಹಾಳಾಗಿ ಆರ್ಥಿಕತೆ ಕುಸಿದಿರುವುದನ್ನು ಉಲ್ಲೇಖಿಸಿ, ತಕ್ಷಣದ ಕ್ರಮ ಅಗತ್ಯವಿದೆ ಎಂದು ಹೇಳಿದರು.

ಸಭೆಯಲ್ಲಿ ಪಾಲ್ಗೊಂಡ ಸಾರ್ವಜನಿಕರು ರಸ್ತೆಗಳ ದುಸ್ಥಿತಿ, ಗದಗ-ಕೃಷ್ಣಾವರ ರೈಲು ಯೋಜನೆ, ಸನಿಹದ ನೆಮ್ಮದಿ ಕೇಂದ್ರ ಸ್ಥಳಾಂತರ ಸಾಧ್ಯತೆ ಕುರಿತು ಆತಂಕ ವ್ಯಕ್ತಪಡಿಸಿದರು. ನರೇಗಲ್ಲ ದೊಡ್ಡ ಹೋಬಳಿಯಾಗಿರುವುದರಿಂದ ಸಬ್‌ರಜಿಸ್ಟ್ರಾರ್ ಕಚೇರಿ ವಾರದಲ್ಲಿ ಕನಿಷ್ಠ ಮೂರು ದಿನ ಕಾರ್ಯನಿರ್ವಹಿಸುವಂತೆ ವ್ಯವಸ್ಥೆ ಮಾಡಬೇಕು ಎಂದು ಆಗ್ರಹಿಸಿದರು. ಜನರು ತಾಲೂಕು ಕೇಂದ್ರಕ್ಕೆ ಅನಗತ್ಯವಾಗಿ ಸುತ್ತಾಡದಂತೆ ಜಿಲ್ಲಾಡಳಿತ ಕ್ರಮ ಕೈಗೊಳ್ಳಬೇಕೆಂದು ಸಲಹೆ ನೀಡಿದರು.

ಕೊನೆಗೆ ಈ ಎಲ್ಲ ಸಮಸ್ಯೆಗಳಿಗೆ ಶಾಶ್ವತ ಪರಿಹಾರಕ್ಕಾಗಿ ಶಾಸಕ ಮತ್ತು ಸಂಸದರೊಂದಿಗೆ ಸಂವಾದ ಏರ್ಪಡಿಸುವ ನಿರ್ಧಾರಕ್ಕೆ ಸಭೆ ಬಂದಿತು.

ಸಭೆಯಲ್ಲಿ ಶಿವಪುತ್ರಪ್ಪ ಸಂಗನಾಳ, ದೊಡ್ಡಯ್ಯ ಅರವಟಗಿಮಠ, ನಿಂಗಪ್ಪ ಹೊನ್ನಾಪೂರ, ಉಮೇಶ ಸಂಗನಾಳಮಠ, ಶರಣಪ್ಪ ಧರ್ಮಾಯತ, ವೀರಯ್ಯ ಚೌಕಿಮಠ ಸೇರಿದಂತೆ ವಿವಿಧ ಸಂಘಟನೆಗಳ ಅಧ್ಯಕ್ಷರು, ಸದಸ್ಯರು ಹಾಗೂ ನಿವೃತ್ತ ಸೈನಿಕರ ಸಂಘದ ಸದಸ್ಯರು ಉಪಸ್ಥಿತರಿದ್ದರು.

> "ನರೇಗಲ್ಲ ಅಭಿವೃದ್ಧಿಗೆ ಮಾತಿನ ಮಟ್ಟದಲ್ಲಿ ಅಲ್ಲ, ಕಾರ್ಯರೂಪದಲ್ಲಿ ಪರಿಹಾರ ಬೇಕು; ಅದಕ್ಕಾಗಿ ಜನಪ್ರತಿನಿಧಿಗಳೊಂದಿಗೆ ನೇರ ಸಂವಾದ ಅನಿವಾರ್ಯ."
> **– ಗ್ರಾಮಸ್ಥರು**

## ಸಾಕ್ಷಿ ಸುಭಾಷಿತ

ದೇವರ ನುಡಿಯನ್ನು ನಿಮ್ಮ ಕಿವಿಯಿಂದಲ್ಲ
ಹೃದಯದಿಂದ ಕೇಳಿಸಿಕೊಳ್ಳಿ

–ಸುಭಾಷಿತ

# ಇಂದು ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಹಯೋಗದಲ್ಲಿ ಹರ್ತಿ ಗ್ರಾಮದ ಶ್ರೀ ಬಸವೇಶ್ವರ ದೇವಸ್ಥಾನದ ಸಮೀಪ ಸುಸಜ್ಜಿತ ಗೌರವ ಘಟಕ ಹಾಗೂ ತಡೆಗೋಡೆ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜಾ ಸಮಾರಂಭವನ್ನು ಮೇ 03ರಂದು ಸಂಜೆ 4.30 ಗಂಟೆಗೆ ದೇವಸ್ಥಾನದ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮಕ್ಕೆ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಘನ ಉಪಸ್ಥಿತಿ ವಹಿಸಲಿದ್ದಾರೆ. ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಭೂಮಿ ಪೂಜೆ ನೆರವೇರಿಸಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಸದಸ್ಯ ಹಾಗೂ ಸರ್ಕಾರಿ ಮುಖ್ಯ ಸಚೇತಕ ಸಲೀಂ ಅಹ್ಮದ್, ಕರ್ನಾಟಕ ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, ಹಾವೇರಿ ಸಂಸದ ಹಾಗೂ ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ ಹಾಗೂ ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ ಮತ್ತು ಪ್ರದೀಪ್ ಶೆಟ್ಟರ್ ಭಾಗವಹಿಸಲಿದ್ದಾರೆ.

ಇದಲ್ಲದೆ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಚಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ತಾಲೂಕು ಮಟ್ಟದ ಪ್ರಾಧಿಕಾರದ ಪ್ರತಿನಿಧಿ ಅಶೋಕ ಮಂದಾಲಿ ಉಪಸ್ಥಿತರಿರುವರು.

ವಿಶೇಷ ಆಹ್ವಾನಿತರಾಗಿ ಪ್ರವಾಸೋದ್ಯಮ ಇಲಾಖೆಯ ಕಾರ್ಯದರ್ಶಿ ಡಾ. ಕೆ.ವಿ. ತ್ರಿಲೋಕಚಂದ್ರ, ಯೋಜನೆ ಮತ್ತು ಕಾರ್ಯಕ್ರಮ ಸಂಯೋಜನೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಡಾ. ಎಂ.ವಿ. ವೇಂಕಟೇಶ, ಪ್ರವಾಸೋದ್ಯಮ ಇಲಾಖೆ ಆಯುಕ್ತ ಅಕ್ರಂ ಪಾಷಾ ಹಾಗೂ ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತೆ ಜಾನಕಿ ಕೆ.ಎಂ ಆಗಮಿಸಲಿದ್ದಾರೆ.

ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ್ವರ ವೈ. ವಿಭೂತಿ ಹಾಗೂ ನಿರ್ಮಿತಿ ಕೇಂದ್ರ ಯೋಜನಾ ವ್ಯವಸ್ಥಾಪಕ ಗಂಗಾಧರ ಶಿರೋಳ ಎಲ್ಲರನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿದ್ದಾರೆ.

### ಕಚೇರಿ ಒಳಗೆ ಮಳೆ ನುಗ್ಗುವ ಭೀತಿ; ದಾಖಲೆಗಳು ಅಪಾಯದ ಅಂಚಿನಲ್ಲಿ..!

# ಜಕ್ಕಲಿ ಗ್ರಾಪಂ ಕಟ್ಟಡದ ಮೇಲ್ಛಾವಣಿ ಉಡಾಯಿಸಿದ ಬಿರುಗಾಳಿ!



**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ರೋಣ ತಾಲೂಕಿನ ಜಕ್ಕಲಿ ಗ್ರಾಮ ಪಂಚಾಯಿತಿ ಕಟ್ಟಡವು ಎಪ್ರಿಲ್ 21ರಂದು ಸುರಿದ ಭಾರೀ ಮಳೆ ಹಾಗೂ ಬಿರುಗಾಳಿಗೆ ತೀವ್ರ ಹಾನಿಗೊಳಗಾಗಿ ಮೇಲ್ಛಾವಣಿ ಸಂಪೂರ್ಣವಾಗಿ ಧ್ವಂಸಗೊಂಡಿದೆ. ಕಟ್ಟಡದ ಮೇಲ್ಛಾವಣಿಗೆ ಹಾಕಿದ್ದ ತಗಡುಗಳು ಹಾರಿ ಹೋಗಿದ್ದು, ಮಳೆ ಮುಂದುವರಿದರೆ ನೀರು ನೇರವಾಗಿ ಒಳನುಗ್ಗುವ ಅಪಾಯ ಎದುರಾಗಿದೆ.

ಪ್ರಸ್ತುತ ತಾತ್ಕಾಲಿಕವಾಗಿ ಟಾರ್ಪಲಿನ್ ಹೊದಿಕೆ ಹಾಕಲಾಗಿದ್ದರೂ, ಅದು ಸಮರ್ಪಕ ರಕ್ಷಣೆಯಾಗಿಲ್ಲ. ಕಚೇರಿಯೊಳಗೆ ಸಿಬ್ಬಂದಿ ಕುಳಿತು ಕಾರ್ಯನಿರ್ವಹಿಸಲು ಕಷ್ಟಕರ ಪರಿಸ್ಥಿತಿ ನಿರ್ಮಾಣವಾಗಿದ್ದು, ಪ್ಲಾಸ್ಟಿಕ್ ಹೊದಿಕೆ ಮೂಲಕ ಮಳೆಯಿಂದ ತಾತ್ಕಾಲಿಕ ರಕ್ಷಣೆ ಪಡೆಯಲಾಗುತ್ತಿದೆ.

ಸುಮಾರು 71 ವರ್ಷಗಳ ಇತಿಹಾಸ ಹೊಂದಿರುವ ಈ ಗ್ರಾಮ ಪಂಚಾಯಿತಿ ಕಟ್ಟಡವು 1955ರ ಫೆಬ್ರವರಿ 3ರಂದು ಸ್ಥಾಪನೆಯಾಗಿದ್ದು, ಇದೀಗ ಬಿರುಗಾಳಿಯ ಅಬ್ಬರಕ್ಕೆ ಸಂಪೂರ್ಣವಾಗಿ ನಲುಗಿ ಹೋಗಿರುವುದು ಗ್ರಾಮಸ್ಥರಲ್ಲಿ ಆತಂಕ ಮೂಡಿಸಿದೆ.

> "ಅಧಿಕಾರಿಗಳು ಭೇಟಿ ನೀಡಿ ಹೋಗುವುದಕ್ಕೆ ಮಾತ್ರ ಸೀಮಿತವಾಗಬಾರದು. ತಕ್ಷಣ ದುರಸ್ತಿ ಕಾರ್ಯ ಆರಂಭಿಸಿ ದಾಖಲೆಗಳನ್ನು ರಕ್ಷಿಸಬೇಕು."
>
> – ಗ್ರಾಮಸ್ಥರು

ಕಚೇರಿಯಲ್ಲಿ ಸಂಗ್ರಹವಾಗಿರುವ ಜನನ–ಮರಣ ಪ್ರಮಾಣಪತ್ರಗಳು ಹಾಗೂ ಆಸ್ತಿ ಹಕ್ಕು ದಾಖಲೆಗಳು (ಫಾರಂ ನಂ. 9 ಮತ್ತು 11) ಸೇರಿದಂತೆ ಪ್ರಮುಖ ದಾಖಲೆಗಳು ಮಳೆ ನೀರಿನಿಂದ ಹಾನಿಗೊಳಗಾಗುವ ಭೀತಿ ಎದುರಾಗಿದೆ. ಈ ದಾಖಲೆಗಳ ರಕ್ಷಣೆಯ ಬಗ್ಗೆ ಸಾರ್ವಜನಿಕರು ಗಂಭೀರ ಚಿಂತೆಯಲ್ಲಿ ಮುಳುಗಿದ್ದಾರೆ.

ಘಟನೆ ನಡೆದ ಮರುದಿನವೇ ರೋಣ ತಹಸೀಲ್ದಾರ್ ಹಾಗೂ ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರೂ, ಹತ್ತು ಹನ್ನೆರಡು ದಿನಗಳು ಕಳೆದರೂ ದುರಸ್ತಿ ಕಾರ್ಯ ಆರಂಭವಾಗಿಲ್ಲ. ಇದರಿಂದ ಗ್ರಾಮಸ್ಥರಲ್ಲಿ ಆಕ್ರೋಶ ವ್ಯಕ್ತವಾಗಿದೆ.

ಗ್ರಾಮ ಪಂಚಾಯಿತಿಗೆ ನೂತನ ಕಟ್ಟಡ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡುವಂತೆ ಪಿಡಿಒ ಶಾಸಕರಿಗೆ ಪತ್ರ ಬರೆದಿದ್ದಾರೆ. ಮಳೆಗಾಲ ತೀವ್ರಗೊಳ್ಳುವ ಮೊದಲು ತಾಲೂಕು ಹಾಗೂ ಜಿಲ್ಲಾ ಮಟ್ಟದ ಅಧಿಕಾರಿಗಳು ತುರ್ತು ಕ್ರಮ ಕೈಗೊಂಡು ಕಟ್ಟಡ ದುರಸ್ತಿ ಹಾಗೂ ದಾಖಲೆಗಳ ರಕ್ಷಣೆಗೆ ಮುಂದಾಗಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

**ದಾಖಲೆಗಳೇ ಅಪಾಯದಲ್ಲಿ!**

ಗ್ರಾಮ ಪಂಚಾಯಿತಿ ಕಚೇರಿಯಲ್ಲಿ ಸಂಗ್ರಹಿತವಾಗಿರುವ ಜನನ–ಮರಣ ಪ್ರಮಾಣಪತ್ರಗಳು, ಆಸ್ತಿ ಹಕ್ಕು ದಾಖಲೆಗಳು ಸೇರಿದಂತೆ ಪ್ರಮುಖ ಕಡತಗಳು ಮಳೆ ನೀರಿನಿಂದ ನೆನೆದು ನಾಶವಾಗುವ ಭೀತಿ ಗಂಭೀರವಾಗಿದೆ.

### ಶ್ರೀ ಜ. ಫಕೀರೇಶ್ವರ ಜಾತ್ರೆಯಲ್ಲಿ ಉಭಯ ಶ್ರೀಗಳಿಂದ ಸಂಪ್ರದಾಯಿಕ ಆಚರಣೆ ಬೆಲ್ಲದ ಚೂರುಗಳಿಗಾಗಿ ಭಕ್ತರ ಉತ್ಸಾಹ

# ಭಕ್ತರ ಸಂಭ್ರಮದ ನಡುವೆ ಅದ್ದೂರಿ ಕಡುಬಿನ ಕಾಳಗ

**■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಭಾವೈಕ್ಯತೆಯ ಹರಿಕಾರ ಕರ್ತೃ ಶ್ರೀ ಜ. ಫಕೀರೇಶ್ವರರ ಜಾತ್ರಾ ಮಹೋತ್ಸವದ ಎರಡನೇ ದಿನವಾದ ಶನಿವಾರ ಸಂಜೆ, ಸಹಸ್ರಾರು ಭಕ್ತರ ಹರ್ಷೋದ್ಗಾರದ ಮಧ್ಯೆ ಸಂಪ್ರದಾಯಬದ್ಧವಾದ ಕಡುಬಿನ ಕಾಳಗ ಅದ್ದೂರಿಯಾಗಿ ನಡೆಯಿತು.

ಸಂಪ್ರದಾಯದಂತೆ ಜ. ಫ. ಸಿದ್ದರಾಮ ಸ್ವಾಮೀಜಿ ಹಾಗೂ ಉತ್ತರಾಧಿಕಾರಿ ಜ. ಫ. ದಿಂಗಾಲೇಶ್ವರ ಸ್ವಾಮೀಜಿ ಅವರು ಶ್ರೀಮಠದಲ್ಲಿರುವ ಲಕ್ಷ್ಮೀದೇವಿಗೆ ಪೂಜೆ ಸಲ್ಲಿಸಿ, ಬಳಿಕ ಕರ್ತೃ ಶ್ರೀ ಫಕೀರೇಶ್ವರರ ಗದ್ದುಗೆಗೆ ನಮಸ್ಕರಿಸಿದರು. ನಂತರ ಜ. ಫ. ಸಿದ್ದರಾಮ ಸ್ವಾಮೀಜಿ ಅಶ್ವಾರೂಢರಾಗಿ ಕಡುಬಿನ ಕಾಳಗಕ್ಕೆ ಚಾಲನೆ ನೀಡಿದರು.

ಶ್ರೀಮಠದ ಪರಂಪರೆಯಂತೆ ಕರ್ತೃ ಗದ್ದುಗೆಗೆ ಮೂರು ಸುತ್ತು ಹಾಗೂ ರಥದ ಬೀದಿಯಲ್ಲಿ ಎರಡು ಸುತ್ತು ಕಾಳಗ ನಡೆಯಿತು. ಈ ವೇಳೆ ಉಭಯ ಶ್ರೀಗಳು ಸೇವಕರು ತಂದುಕೊಡುತ್ತಿದ್ದ ಬೆಲ್ಲದ ಚೂರುಗಳನ್ನು ಭಕ್ತರತ್ತ ಎಸೆಯುತ್ತಿದ್ದು, ಭಕ್ತರು "ಈ ಕಡೆ ಈ ಕಡೆ" ಎಂದು ಕೂಗಿ ಉತ್ಸಾಹ ವ್ಯಕ್ತಪಡಿಸಿದರು. ಸಿಕ್ಕ ಬೆಲ್ಲದ ಚೂರನ್ನು ಭಕ್ತರು ಪ್ರಸಾದವಾಗಿ ಸ್ವೀಕರಿಸಿದರು.



ಕೊನೆಯ ಸುತ್ತಿನ ಬಳಿಕ ಶ್ವೇತವರ್ಣದಿಂದ ಕಂಗೊಳಿಸುತ್ತಿದ್ದ ಜ. ಫ. ಸಿದ್ದರಾಮ ಶ್ರೀಗಳಿಗೆ ಮುಸ್ಲಿಂ ಸಮುದಾಯದ ಅತ್ತಾರ ಮನೆತನದವರು ಶ್ರೀಮಠದ ದ್ವಾರದಲ್ಲಿ ಗುಲಾಲ್ ಎರಚುವುದರೊಂದಿಗೆ ಕಾಳಗಕ್ಕೆ ತೆರೆ ಬಿದ್ದಿತು. ಈ ಸಂದರ್ಭ ಹಿಂದೂ–ಮುಸ್ಲಿಂ ಸೌಹಾರ್ದದ ಸಂಕೇತ ಸ್ಪಷ್ಟವಾಗಿ ಗೋಚರಿಸಿತು.

ಜಾತ್ರೆಗೆ ಸಹಸ್ರಾರು ಭಕ್ತರು ಆಗಮಿಸಿದ್ದರಿಂದ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಅವರ ನಿರ್ದೇಶನದಂತೆ ಡಿಎಸ್‌ಪಿ ಮುರ್ತುಜಾ ಖಾದ್ರಿ ನೇತೃತ್ವದಲ್ಲಿ ಕಟ್ಟುನಿಟ್ಟಿನ ಬಂದೋಬಸ್ತ ಕಲ್ಪಿಸಲಾಗಿತ್ತು. ಸಿಪಿಐ ಬಿ.ವಿ. ನ್ಯಾಮಗೌಡ, ಪಿಎಸ್‌ಐ ಈರಪ್ಪ ರಿತ್ತಿ, ಡಿಎಆರ್, ಕೆಎಸ್‌ಆರ್‌ಪಿ ಹಾಗೂ ಸ್ಥಳೀಯ ಪೊಲೀಸರು ಭದ್ರತಾ ಕರ್ತವ್ಯ ನಿರ್ವಹಿಸಿದರು.

# ಮುಳಗುಂದದಲ್ಲಿ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ

**■ ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ರವಿವಾರ ಸಂಜೆ 5.15ಕ್ಕೆ ಭೂಮಿ ಪೂಜೆ ನೆರವೇರಿಸಲಾಗುವುದು ಎಂದು ಮುಳಗುಂದ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಬಿ.ವಿ. ಸುಂಕಾಪೂರ ತಿಳಿಸಿದ್ದಾರೆ.



ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಮತ್ತು ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್.ಕೆ. ಪಾಟೀಲ ಅವರು ಪಟ್ಟಣದ 110/11 ಕೆವಿ ಕೆಪಿಟಿಸಿಎಲ್ ಗ್ರೀಡ್, ಮುಳಗುಂದ ಜೈನ ಬಸದಿ ಅಭಿವೃದ್ಧಿ ಕಾಮಗಾರಿ, ಅಂಗನವಾಡಿ ಸಂಖ್ಯೆ 323 ಹಾಗೂ ಬಸವೇಶ್ವರ ಸಮುದಾಯ ಭವನ ನಿರ್ಮಾಣ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಿದ್ದಾರೆ ಎಂದು ಅವರು ಪತ್ರಿಕಾಗೋಷ್ಠಿಯಲ್ಲಿ ತಿಳಿಸಿದರು.

ಪಟ್ಟಣದ ಅಭಿವೃದ್ಧಿಗೆ ಈ ಕಾಮಗಾರಿಗಳು ಮಹತ್ವದ ಕೊಡುಗೆ ನೀಡಲಿದ್ದು, ಸಾರ್ವಜನಿಕರಿಗೆ ಉತ್ತಮ ಮೂಲಭೂತ ಸೌಕರ್ಯಗಳು ದೊರೆಯಲಿವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಪಂ ಸ್ಥಾಯಿ ಸಮಿತಿಯ ಮಾಜಿ ಅಧ್ಯಕ್ಷ ಎನ್.ಆರ್. ದೇಶಪಾಂಡೆ, ಪಪಂ ಮಾಜಿ ಸದಸ್ಯ ವಿಜಯ ನೀಲಗುಂದ, ಸ್ಥಳೀಯ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಬಸವರಾಜ ಬಾತಾಖಾನಿ, ದಾವೂದ್ ಜಮಾಲಸಾಬನವರ್, ಎ.ಡಿ. ಮುಜಾವಾರ, ಹೈದರ್ ಖವಾಸ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಎಸ್‌ಎಸ್‌ಎಲ್‌ಸಿ ಸಾಧಕರಿಗೆ ಸನ್ಮಾನ

**■ ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡ ಶಹರ ವಲಯದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ 2025–26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಅಂಕಗಳಿಸಿದ ವಿದ್ಯಾರ್ಥಿಗಳನ್ನು ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ ಮಾತನಾಡಿ, ಕಳೆದ ವರ್ಷ ಶೇ.65 ಫಲಿತಾಂಶದೊಂದಿಗೆ ಜಿಲ್ಲೆಯಲ್ಲಿ 6ನೇ ಸ್ಥಾನದಲ್ಲಿದ್ದ ಶಹರ ವಲಯವು, ಈ ಬಾರಿ ಶೇ.97 ಫಲಿತಾಂಶದೊಂದಿಗೆ 4ನೇ ಸ್ಥಾನಕ್ಕೇರಿರುವುದು ಐತಿಹಾಸಿಕ ಸಾಧನೆ ಎಂದು ತಿಳಿಸಿದರು. ಒಟ್ಟು 74 ಪ್ರೌಢಶಾಲೆಗಳಲ್ಲಿ 36 ಶಾಲೆಗಳು ಶೇ.100 ಫಲಿತಾಂಶ ದಾಖಲಿಸಿರುವುದು ವಿಶೇಷವೆಂದು ಹೇಳಿದರು.



ಉತ್ತಮ ಸಾಧನೆಗೈದ ವಿದ್ಯಾರ್ಥಿಗಳಾದ ಪ್ರತೀಕ ಸರದಾರ (622) – ಮಲ್ಲಸಜ್ಜನ ಪ್ರೌಢಶಾಲೆ, ಶಮಂತಿಕಾ ಅಗಡಿ (618) – ಪ್ರಜಂಟೇಶನ್ ಪ್ರೌಢಶಾಲೆ, ಮಾನಸ ಕೋಲ್ಹಾರ (617) – ಕೆ.ಇ. ಬೋರ್ಡ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ಅವನಿ (617) ಹಾಗೂ ಶ್ರೀನಿಧಿ ಹಿರೇಮಠ (617) – ಜೆ.ಎಸ್.ಎಸ್ ಆಂಗ್ಲ ಮಾಧ್ಯಮ ಪ್ರೌಢಶಾಲೆ, ವಿದ್ಯಾಗಿರಿ ಅವರನ್ನು ಸನ್ಮಾನಿಸಲಾಯಿತು.

ಇದೇ ವೇಳೆ ಕರ್ನಾಟಕ ಪ್ರೌಢಶಾಲಾ ಸಹ ಶಿಕ್ಷಕರ ಸಂಘ ಹಾಗೂ ಅನುದಾನಿತ ಪ್ರೌಢಶಾಲಾ ಸಹ ಶಿಕ್ಷಕರ ಸಂಘದ ವತಿಯಿಂದ ಕ್ಷೇತ್ರ ಶಿಕ್ಷಣಾಧಿಕಾರಿ ರಾಮಕೃಷ್ಣ ಸದಲಗಿ, ಕ್ಷೇತ್ರ ಸಮನ್ವಯಾಧಿಕಾರಿ ಪ್ರವೀಣಕುಮಾರ ಗುಜ್ಜರ ಹಾಗೂ ತಾಲೂಕು ಎಸ್‌ಎಸ್‌ಎಲ್‌ಸಿ ನೋಡಲ್ ಬಸವರಾಜ ಚಿಕ್ಕೂರ ಅವರನ್ನು ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಶಿಕ್ಷಕ ಸಂಘದ ಪ್ರತಿನಿಧಿಗಳಾದ ಎಂ.ಜಿ. ಕೊಡ್ಲಿ, ಶಿವಾನಂದ ಖವಟಕೊಪ್ಪ, ಸಂಗಮೇಶ ಹಡಪದ, ಲಿಂಗರಾಜ ಅರ್ಕಸಾಲಿ, ಜಿ.ಎ. ಪೀರಣ್ಣವರ ಉಪಸ್ಥಿತರಿದ್ದರು.

# ನಿವೃತ್ತ ನೌಕರರ ಸಂಘದಲ್ಲಿ ಸದಸ್ಯರ ಹುಟ್ಟುಹಬ್ಬ, ಬಸವ ಜಯಂತಿ ಆಚರಣೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ನಿವೃತ್ತ ನೌಕರರ ಸಂಘದ ಗದಗ ಜಿಲ್ಲಾ ಘಟಕದ ವತಿಯಿಂದ ಬಸವೇಶ್ವರ ನಗರದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಎಪ್ರಿಲ್ ತಿಂಗಳಲ್ಲಿ ಜನಿಸಿದ ಸದಸ್ಯರ ಹುಟ್ಟುಹಬ್ಬವನ್ನು ಆಚರಿಸುವ ಜೊತೆಗೆ ಬಸವ ಜಯಂತಿಯನ್ನೂ ಸಾಂಸ್ಕೃತಿಕ ಕಾರ್ಯಕ್ರಮಗಳೊಂದಿಗೆ ವಿಜೃಂಭಣೆಯಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಬೆಂಗಳೂರಿನ ಶ್ವೇತಾ ಪಾಟೀಲ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಬಸವಣ್ಣ ಅವರ ವಚನಗಳ ಮಹತ್ವವನ್ನು ವಿವರಿಸಿದರು.

"ಬಸವಣ್ಣನವರು ಸಮಾಜದಲ್ಲಿ ಸಮಾನತೆ, ನೈತಿಕತೆ ಹಾಗೂ ಮಾನವೀಯ ಮೌಲ್ಯಗಳನ್ನು ಪ್ರತಿಪಾದಿಸಿದ ಮಹಾನ್ ಚಿಂತಕರು. ಮೌಢ್ಯ ಮತ್ತು ಅಸಮಾನತೆ ನಿರ್ಮೂಲನೆಗೆ ಅವರು ಮಾಡಿದ ಸೇವೆ ಅಪಾರ," ಎಂದು ಹೇಳಿದರು.



ಇದೇ ವೇಳೆ ತಮ್ಮ ಲೇಖನದ ಮೂಲಕ ಹಳೆಯ ಅಡುಗೆ ಮನೆಯ ಸಂಪ್ರದಾಯ ಮತ್ತು ಇಂದಿನ ಓಪನ್ ಕಿಚನ್ ನಡುವಿನ ವ್ಯತ್ಯಾಸಗಳನ್ನು ಹಾಸ್ಯಭರಿತವಾಗಿ ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ನಿವೃತ್ತ ನೌಕರರ ಸಹಕಾರ ಸಂಘದ ಅಧ್ಯಕ್ಷ ಬಿ.ಎಂ. ಬಿಳೇಯಲಿ ವಹಿಸಿ, ಬಸವಣ್ಣನವರ ಸಮಾಜ ಸುಧಾರಣಾ ಕೊಡುಗೆಯನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಏಪ್ರಿಲ್ ತಿಂಗಳಲ್ಲಿ ಜನಿಸಿದ ಸಂಘದ ಸದಸ್ಯರಾದ ಎಸ್.ಟಿ. ಜಕ್ಕನಗೌಡರ, ಟಿ.ಇ. ಕಾಳೆ, ಶಂಭುಲಿಂಗಪ್ಪ ಚಿಗರಿ, ಎಲ್.ಎಸ್. ಲಮಾಣಿ, ಎಂ.ವಿ. ಬದಿ, ಆರ್.ವಿ. ಕುಪಸ್ತ, ವಿ.ಕೆ. ಮರಿಗೌಡರ, ಎಸ್.ಡಿ. ಡಂಬಳ, ಎಸ್.ಎಸ್. ದೇಸಾಯಿ, ಬಿ.ಆರ್. ಕುಲ್ಕರ್ಣಿ ಸೇರಿದಂತೆ ಹಲವರಿಗೆ ನೆನಪಿನ ಕಾಣಿಕೆ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಸಂಘದ ಸದಸ್ಯರು, ಪದಾಧಿಕಾರಿಗಳು ಹಾಗೂ ಮಹಿಳಾ ಸದಸ್ಯರು ಉಪಸ್ಥಿತರಿದ್ದರು.

### ದತ್ತಿ ಪ್ರಶಸ್ತಿ ಪ್ರದಾನ; ಸೇವಾಭಾವಕ್ಕೆ ಕಸಾಪ ಗೌರವ

# ಡಾ. ಶಾಂತಾಬಾಯಿ ಭೂಮರಡ್ಡಿ ಇಂದಿನ ವೈದ್ಯರಿಗೆ ಆದರ್ಶ

**■ ವಿಜಯಸಾಕ್ಷಿ ಸುದ್ದಿ, ಗದಗ**

"ದೈಹಿಕ ನ್ಯೂನ್ಯತೆಯನ್ನು ಮೀರಿ ವೈದ್ಯಕೀಯ ಸೇವೆಯಲ್ಲಿ ಕಾಯಕನಿಷ್ಠೆ ಮೆರೆದ ಡಾ. ಶಾಂತಾಬಾಯಿ ಭೂಮರಡ್ಡಿ ಇಂದಿನ ವೈದ್ಯರಿಗೆ ಪ್ರೇರಣೆ ಹಾಗೂ ಆದರ್ಶ," ಎಂದು ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಹೇಳಿದರು.

ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ವತಿಯಿಂದ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಡಾ. ಶಾಂತಾಬಾಯಿ ಭೂಮರಡ್ಡಿ ಅವರಿಗೆ ಶ್ರೀಮತಿ ಶೇಕುಬಾಯಿ ಎಲ್. ದೇಸಾಯಿ ದತ್ತಿ ಪ್ರಶಸ್ತಿಯನ್ನು ಪ್ರದಾನಿಸಿ ಅವರು ಮಾತನಾಡಿದರು.

ಸಾವಿರಾರು ಸಾಮಾನ್ಯ ಹೆರಿಗೆಯನ್ನು ನೆರವೇರಿಸುವ ಮೂಲಕ ಮಹಿಳೆಯರ ಆರೋಗ್ಯ ಸಂರಕ್ಷಣೆಗೆ ನೀಡಿದ ಸೇವೆ ಶ್ಲಾಘನೀಯವಾಗಿದೆ ಎಂದು ಹೇಳಿದರು.

ಕಳೆದ ದಶಕದಿಂದ ವೈದ್ಯಕೀಯ ಸೇವೆಯ ಜೊತೆಗೆ ಬರವಣಿಗೆಯಲ್ಲೂ ತೊಡಗಿಸಿಕೊಂಡಿರುವ ಡಾ. ಶಾಂತಾಬಾಯಿ ಭೂಮರಡ್ಡಿ ಅವರು, ಪತ್ರಿಕೆಗಳ ಮೂಲಕ ಆರೋಗ್ಯ ಜಾಗೃತಿ ಮೂಡಿಸುವ ಕಾರ್ಯದಲ್ಲಿ ನಿರಂತರವಾಗಿ ತೊಡಗಿದ್ದಾರೆ ಎಂದು ತಿಳಿಸಿದರು.



ದತ್ತಿದಾನಿಗಳಾದ ಡಾ. ಧನೇಶ ದೇಸಾಯಿ ಮಾತನಾಡಿ, ಶೇಕುಬಾಯಿ ಅವರು ಶಿಕ್ಷಣ ಮತ್ತು ಸಂಗೀತ ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿದ್ದ ಪರಹಿತಚಿಂತನೆಯ ವ್ಯಕ್ತಿಯಾಗಿದ್ದು, ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ ಸಮಾಜಮುಖಿ ಸೇವೆಗೆ ಪ್ರೇರೇಪಿಸಿದ್ದರು ಎಂದು ಸ್ಮರಿಸಿದರು. ಅವರ ಸ್ಮರಣಾರ್ಥವಾಗಿ ಸ್ಥಾಪಿಸಿದ ಈ ಪ್ರಶಸ್ತಿಯನ್ನು ಈ ಬಾರಿ ಡಾ. ಶಾಂತಾಬಾಯಿ ಭೂಮರಡ್ಡಿ ಅವರಿಗೆ ನೀಡಿ ಗೌರವಿಸಲಾಗಿದೆ ಎಂದು ಹೇಳಿದರು.

ಡಾ. ಶಾಂತಾಬಾಯಿ ಭೂಮರಡ್ಡಿ ಅವರ ಕಾಯಕನಿಷ್ಠೆ, ಶ್ರದ್ಧೆ ಹಾಗೂ ರೋಗಿಗಳೊಂದಿಗೆ ಹೊಂದಿರುವ ಆತ್ಮೀಯತೆ ಕುರಿತು ರಾಜು ಗುಡಿಮನಿ, ಡಾ. ಜಿ.ಬಿ. ಬೀಡಿನಹಾಳ, ಕೆ.ಎಚ್. ಬೇಲೂರ ಹಾಗೂ ಡಾ. ಪ್ರಭಾ ದೇಸಾಯಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಡಾ. ಜಗದೀಶ ಭೂಮರಡ್ಡಿ, ಚಂದ್ರಶೇಖರ ವಸ್ತ್ರದ, ಅನ್ನದಾನಿ ಹಿರೇಮಠ, ಭಾರತಿ ಕೋಟಿ, ಶ್ವೇತಾ ಕೋಟಿ, ಸುರೇಖಾ ಪಿಳ್ಳಿ ಹಾಗೂ ಶಾರದಾ ಕಾತರಕಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಲಕ್ಕುಂಡಿ ವೈಭವ ಅನಾವರಣಕ್ಕೆ ಸರ್ಕಾರದ ಮಹಾಯೋಜನೆ

▶▶ ಮೊದಲನೇ ಪುಟದಿಂದ

ಲಕ್ಕುಂಡಿ–ಗದಗ–ಕಪ್ಪತಗುಡ್ಡವನ್ನು ಪ್ರವಾಸಿ ವಲಯಗಳಾಗಿ ರೂಪಿಸಲಾಗುತ್ತಿದ್ದು, ಮುಖ್ಯಮಂತ್ರಿಗಳ ಬೆಂಬಲದೊಂದಿಗೆ ಅಗತ್ಯವಿರುವ ಎಲ್ಲಾ ಪ್ರಸ್ತಾವನೆಗಳನ್ನು ಮಂಜೂರು ಮಾಡಲಾಗುವುದು. ಲಕ್ಕುಂಡಿಯನ್ನು ಜಾಗತಿಕ ಮಟ್ಟದಲ್ಲಿ ಗುರುತಿಸಬಹುದಾದ ಪುರಾತತ್ವ ಕೇಂದ್ರವನ್ನಾಗಿ ರೂಪಿಸಲು ಸರ್ಕಾರ ಬದ್ಧವಾಗಿದೆ ಎಂದು ಸಚಿವ ಎಚ್. ಕೆ. ಪಾಟೀಲ ಹೇಳಿದರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಶಾಸಕ ಸಿ. ಸಿ. ಪಾಟೀಲ, ರಾಜ್ಯ ವಿಕೇಂದ್ರಿಕಾರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ. ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ. ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಪುರಾತತ್ವ ಇಲಾಖೆ ಆಯುಕ್ತ ಎ. ದೇವರಾಜು, ಲಕ್ಕುಂಡಿ ಪ್ರಾಧಿಕಾರ ಆಯುಕ್ತ ಡಾ. ಶರಣು ಗೋಗೇರಿ, ಜಿಪಂ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ, ಉಪ ವಿಭಾಗಾಧಿಕಾರಿ ಎಂ. ಗಂಗಪ್ಪ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ, ಸಲಹಾ ಸಮಿತಿ ಸದಸ್ಯರಾದ ಜಿ. ಸಿ. ಬೆಟಸೂರುಮಠ, ಸಿದ್ದು ಪಾಟೀಲ, ಗೀತಾಂಜಲಿ ರಾವ, ಅ. ದ. ಕಟ್ಟಿಮನಿ, ಇಒ ಎಚ್. ಎಸ್. ಜಿನಗಾ, ಪಿಡಿಒ ಅಮೀರ ನಾಯಕ ಬಸವರಾಜ ಕಡೆಮನಿ, ವಾಸಣ್ಣ ಕುರಡಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

### ಪುರಾತತ್ವ ಸಂಪತ್ತು ಅನಾವರಣಕ್ಕೆ ಜನರ ಪ್ರಾಮಾಣಿಕತೆಗೆ ಶಾಸಕ ಸಿ.ಸಿ. ಪಾಟೀಲ ಶ್ಲಾಘನೀಯ

# ಲಕ್ಕುಂಡಿ ವೈಭವ ಅನಾವರಣಕ್ಕೆ ಗ್ರಾಮಸ್ಥರ ಸಹಕಾರ ಅಮೂಲ್ಯ

■ ವಿಜಯಸಾಕ್ಷಿ ಸುದ್ದಿ, ಗದಗ

ಎರಡು ಸಾವಿರ ವರ್ಷಗಳ ಹಿಂದಿನ ಇತಿಹಾಸವನ್ನು ಹೊತ್ತಿರುವ ಲಕ್ಕುಂಡಿಯ ಪುರಾತತ್ವ ಸಂಪತ್ತು ಇಂದಿನ ಪೀಳಿಗೆಗೆ ಅಚ್ಚರಿಯ ವಿಷಯವಾಗಿದೆ. ಆ ಕಾಲದ ಶಿಲ್ಪಿಗಳ ಪ್ರತಿಭೆ, ಶ್ರಮ ಹಾಗೂ ಕಲಾತ್ಮಕತೆ ಎಷ್ಟು ಉನ್ನತ ಮಟ್ಟದಲ್ಲಿತ್ತೆಂಬುದಕ್ಕೆ ಇಲ್ಲಿ ದೊರೆಯುತ್ತಿರುವ ವಸ್ತುಗಳೇ ಸಾಕ್ಷಿಯಾಗಿದೆ ಎಂದು ಶಾಸಕ ಸಿ.ಸಿ. ಪಾಟೀಲ ಹೇಳಿದರು.

ಲಕ್ಕುಂಡಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಗ್ರಾಮಸ್ಥರು ಪುರಾತತ್ವ ವಸ್ತುಗಳನ್ನು ಸ್ವಯಂಪ್ರೇರಿತವಾಗಿ ಸರ್ಕಾರಕ್ಕೆ ಒಪ್ಪಿಸುತ್ತಿರುವುದು ಅತ್ಯಂತ ಶ್ಲಾಘನೀಯ ಕಾರ್ಯವಾಗಿದೆ. ಹಳೆಯ ನಾಣ್ಯಗಳು, ಮುತ್ತು–ರತ್ನಗಳು ಸೇರಿದಂತೆ ಅಪರೂಪದ ವಸ್ತುಗಳನ್ನು ಸಂಗ್ರಹಿಸಿ ನೀಡುತ್ತಿರುವುದು ಲಕ್ಕುಂಡಿಯ ಮಹತ್ವವನ್ನು ರಾಜ್ಯಾದ್ಯಂತ ಪರಿಚಯಿಸುತ್ತಿದೆ ಎಂದು ಹೇಳಿದರು.

ಸಚಿವ ಎಚ್ ಕೆ. ಪಾಟೀಲ ಅವರ ನೇತೃತ್ವದಲ್ಲಿ ನಡೆಯುತ್ತಿರುವ ಅನ್ವೇಷಣಾ ಕಾರ್ಯಗಳು ಲಕ್ಕುಂಡಿಯನ್ನು ಮತ್ತಷ್ಟು ಪ್ರಸಿದ್ಧಿಗೊಳಿಸುತ್ತಿವೆ. ಕೇವಲ ಬಂಗಾರದ ಆಕರ್ಷಣೆಯಷ್ಟೇ ಅಲ್ಲದೆ,




ಶಿಲ್ಪಕಲೆ, ಶಿಲಾನ್ಯಾಸಗಳು ಹಾಗೂ ಗತ ವೈಭವದ ಅನೇಕ ಅಮೂಲ್ಯ ಅಂಶಗಳು ಇಲ್ಲಿ ಅಡಗಿವೆ. ಲಕ್ಕುಂಡಿಯಲ್ಲಿ ಈಗಾಗಲೇ ಪತ್ತೆಯಾಗಿರುವ ವಸ್ತುಗಳು ಕೇವಲ ಪ್ರಾರಂಭ ಮಾತ್ರವಾಗಿದ್ದು, ಇನ್ನಷ್ಟು ಅನ್ವೇಷಣೆ ಮಾಡಿದರೆ ಹೊಸ ಲಕ್ಕುಂಡಿಯೇ ಮೂಡಿಬರುವಷ್ಟು ಪುರಾತತ್ವ ಸಂಪತ್ತು ಸಿಗುವ ಸಾಧ್ಯತೆ ಇದೆ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ.ಪಾಟೀಲ, ರಾಜ್ಯ ವೀಕೇಂದ್ರಿಕಾರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ. ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ. ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಪುರಾತತ್ವ ಇಲಾಖೆ ಆಯುಕ್ತ ಎ. ದೇವರಾಜು, ಲಕ್ಕುಂಡಿ ಪ್ರಾಧಿಕಾರ ಆಯುಕ್ತ ಡಾ. ಶರಣು ಗೋಗೇರಿ, ಜಿಪಂ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ, ಉಪ ವಿಭಾಗಾಧಿಕಾರಿ ಎಂ. ಗಂಗಪ್ಪ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ, ಸಲಹಾ ಸಮಿತಿ ಸದಸ್ಯರಾದ ಜಿ. ಸಿ. ಬೆಟಸೂರುಮಠ, ಸಿದ್ದು ಪಾಟೀಲ, ಗೀತಾಂಜಲಿ ರಾವ, ಅ. ದ. ಕಟ್ಟಿಮನಿ, ಇಒ ಎಚ್. ಎಸ್. ಜಿನಗಾ, ಪಿಡಿಒ ಅಮೀರ ನಾಯಕ ಬಸವರಾಜ ಕಡೆಮನಿ, ವಾಸಣ್ಣ ಕುರಡಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

> "ಲಕ್ಕುಂಡಿಯ ಪುರಾತತ್ವ ಸಂಪತ್ತು ಕೇವಲ ಇತಿಹಾಸವಲ್ಲ, ಭವಿಷ್ಯಕ್ಕೆ ದಾರಿ ತೋರಿಸುವ ಶಕ್ತಿ ಹೊಂದಿದೆ."
> – ಸಿ.ಸಿ. ಪಾಟೀಲ, ಶಾಸಕ

# ಗೊಜನೂರು ಮೊರಾರ್ಜಿ ವಸತಿ ಶಾಲೆಗೆ ಶೇ.100 ಫಲಿತಾಂಶ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ತಾಲೂಕಿನ ಗೊಜನೂರು ಗ್ರಾಮದ ಮೊರಾರ್ಜಿ ದೇಸಾಯಿ ವಸತಿ ಶಾಲೆಯ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಶೇ.100 ಫಲಿತಾಂಶ ದಾಖಲಾಗಿದೆ. ಒಟ್ಟು ಪರೀಕ್ಷೆಗೆ ಹಾಜರಾದ 49 ವಿದ್ಯಾರ್ಥಿಗಳಲ್ಲಿ 42 ಮಂದಿ ಉನ್ನತ ಶ್ರೇಣಿಯಲ್ಲಿ ಹಾಗೂ 7 ಮಂದಿ ಪ್ರಥಮ ಶ್ರೇಣಿಯಲ್ಲಿ ಉತ್ತೀರ್ಣರಾಗಿದ್ದಾರೆ. ಶಾಲೆಯ ಪರಶುರಾಮ ಕಳ್ಳಿಮನಿ 98.5%, ಗೌತಮಿ ಸುಲ್ತಾನಪುರ 98%, ಗೌರಿಶಂಕರ ಹಲಸೂರು 98%, ಉದಯಕುಮಾರ ಹುಲ್ಲೂರು 98%, ಪಲ್ಲವಿ ಬೆಟಗೇರಿ 97%, ಅಭಿಷೇಕ ಲಮಾಣಿ 97.5%, ಲಕ್ಷ್ಮಿ ದೊಡ್ಡಗೌಡ್ರ 97%, ಈಶ್ವರ ಶೆಟ್ಟರ 96.5%, ರಾಕೇಶ ಬಂಡಿವಾಡ 96.5%, ದೇವಿಪ್ರಸಾದ ಕುದುರಿ 96.5%, ಸೌಮ್ಯ ಕುಂಬಾರ 96%, ಮೇಘಾ ಲಮಾಣಿ 96% ಹಾಗೂ ವರುಣ ಬಡ್ಡಿ 96% ಅಂಕಗಳನ್ನು ಗಳಿಸಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಸಮಾಜ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ ಅಧಿಕಾರಿಗಳು ಹಾಗೂ ಶಿಕ್ಷಕ ವೃಂದ ಹರ್ಷ ವ್ಯಕ್ತಪಡಿಸಿದ್ದಾರೆ.

# ಅಲ್ಪಸಂಖ್ಯಾತರ ಅಭಿವೃದ್ಧಿಗೆ ರೂ. 650 ಕೋಟಿ: ಸರ್ಕಾರದ ನಿರ್ಧಾರಕ್ಕೆ ಬಿಜೆಪಿ ವಿರೋಧ

■ ವಿಜಯಸಾಕ್ಷಿ ಸುದ್ದಿ, ಗದಗ



ರಾಜ್ಯ ಸರ್ಕಾರ ಅಲ್ಪಸಂಖ್ಯಾತರ ಕಾಲೋನಿಗಳ ಅಭಿವೃದ್ಧಿಗಾಗಿ ರೂ. 650 ಕೋಟಿ ಅನುದಾನ ಮೀಸಲಿಡಲು ಸಚಿವ ಸಂಪುಟ ಸಭೆಯಲ್ಲಿ ತೀರ್ಮಾನಿಸಿರುವುದಕ್ಕೆ ಬಿಜೆಪಿ ತೀವ್ರ ವಿರೋಧ ವ್ಯಕ್ತಪಡಿಸಿದೆ.

ಜಿಲ್ಲಾ ಬಿಜೆಪಿ ವಕ್ತಾರ ಎಂ.ಎನ್. ಹಿರೇಮಠ ಅವರು ಈ ನಿರ್ಧಾರವನ್ನು ಟೀಕಿಸಿ,

"ಇದು ತಘಲಕ್ ಧೋರಣೆಯ ತೀರ್ಮಾನ. ಸರ್ಕಾರವು ಪದೇಪದೇ ಅಲ್ಪಸಂಖ್ಯಾತರನ್ನು ಓಲೈಸಲು ಸಾರ್ವಜನಿಕ ಹಣವನ್ನು ಬಳಸುತ್ತಿದೆ," ಎಂದು ಆರೋಪಿಸಿದರು.

ರಾಜ್ಯ ಸರ್ಕಾರವು ಎಲ್ಲ ವರ್ಗಗಳ ಅಭಿವೃದ್ಧಿಗೆ ಸಮಪಾಲು ನೀಡಬೇಕಾಗಿದ್ದು, ಒಂದೇ ಸಮುದಾಯದ ಪರವಾಗಿ ನಿರಂತರವಾಗಿ ಅನುದಾನ ಘೋಷಣೆ ಮಾಡುವುದು ಸರಿಯಲ್ಲ ಎಂದು ಅವರು ಹೇಳಿದರು.

"ಹಿಂದೂ ಸಮುದಾಯದ ಅಭಿವೃದ್ಧಿಗೆ ಸಮರ್ಪಕ ಅನುದಾನ ದೊರೆಯುತ್ತಿಲ್ಲ ಎಂಬ ಭಾವನೆ ಜನರಲ್ಲಿ ಮೂಡುತ್ತಿದೆ," ಎಂದು ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿಗಳ "ಸರ್ವರಿಗೂ ಸಮಪಾಲು, ಸರ್ವರಿಗೂ ಸಮಬಾಳು" ಎಂಬ ಮಾತು ಕಾರ್ಯರೂಪದಲ್ಲಿ ಕಾಣಿಸುತ್ತಿಲ್ಲ ಎಂದು ಟೀಕಿಸಿದ ಅವರು, ಕೇಂದ್ರ ಸರ್ಕಾರದ ಯೋಜನೆಗಳು ಜಾತಿ–ಮತ ಭೇದವಿಲ್ಲದೆ ಎಲ್ಲರಿಗೂ ತಲುಪುತ್ತಿವೆ ಎಂದು ಹೇಳಿದರು.

ಇತ್ತೀಚಿನ ರಾಜಕೀಯ ಬೆಳವಣಿಗೆಗಳು ಹಾಗೂ ಉಪಚುನಾವಣೆಗಳ ಹಿನ್ನೆಲೆಯಲ್ಲಿಯೂ ಸರ್ಕಾರದ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂಬ ಅನುಮಾನ ವ್ಯಕ್ತಪಡಿಸಿದ ಅವರು,

"ಸರ್ಕಾರವು ಮತ ರಾಜಕಾರಣಕ್ಕೆ ಒತ್ತು ನೀಡದೇ, ರಾಜ್ಯದ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡಬೇಕು," ಎಂದು ಒತ್ತಾಯಿಸಿದರು.

ರಾಜ್ಯದ ಆರ್ಥಿಕ ಸ್ಥಿತಿ ಹಾಗೂ ಆಡಳಿತ ವ್ಯವಸ್ಥೆಯ ಮೇಲೂ ಪ್ರಶ್ನೆ ಎತ್ತಿದ ಹಿರೇಮಠ, ಸರ್ಕಾರವು ಎಲ್ಲಾ ವರ್ಗಗಳ ಹಿತದೃಷ್ಟಿಯಿಂದ ಸಮತೋಲನ ನೀತಿಗಳನ್ನು ಅನುಸರಿಸಬೇಕೆಂದು ಆಗ್ರಹಿಸಿದ್ದಾರೆ.

# ಅತಿಥಿ ಉಪನ್ಯಾಸಕರಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಚಾಮರಾಜೇಂದ್ರ ಸರ್ಕಾರಿ ದೃಶ್ಯಕಲಾ ಕಾಲೇಜು (ಕಾವಾ), ಮೈಸೂರು ಸಂಸ್ಥೆಯಲ್ಲಿ 2026–27ನೇ ಸಾಲಿಗೆ ಅತಿಥಿ ಉಪನ್ಯಾಸಕರು ಹಾಗೂ ಸಂಪನ್ಮೂಲ ವ್ಯಕ್ತಿಗಳಾಗಿ ಕಾರ್ಯನಿರ್ವಹಿಸಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಆಸಕ್ತ ಅಭ್ಯರ್ಥಿಗಳು ಮೇ 15ರವರೆಗೆ ಅರ್ಜಿ ಸಲ್ಲಿಸಬಹುದಾಗಿದೆ. ಅರ್ಜಿದಾರರ ಸಂದರ್ಶನವು ಮೇ 19ರಂದು ಬೆಳಿಗ್ಗೆ 11 ಗಂಟೆಗೆ ಸಂಸ್ಥೆಯ ಆವರಣದಲ್ಲಿ ನಡೆಯಲಿದೆ. ಆಯ್ಕೆಯಾದ ಅಭ್ಯರ್ಥಿಗಳು ತರಗತಿಗಳ ಅವಶ್ಯಕತೆ ಅನುಗುಣವಾಗಿ ಕಾರ್ಯನಿರ್ವಹಿಸಬೇಕಾಗುತ್ತದೆ.

ಹೆಚ್ಚಿನ ಮಾಹಿತಿಗಾಗಿ ಅಭ್ಯರ್ಥಿಗಳು www.mysore.nic.in ಮತ್ತು www.cavamysore.karnataka.gov.in ವೆಬ್‌ಸೈಟ್‌ಗಳನ್ನು ಭೇಟಿ ಮಾಡಬಹುದಾಗಿದೆ. ಇದಲ್ಲದೆ, ಹೆಚ್ಚಿನ ವಿವರಗಳಿಗೆ ಸಂಸ್ಥೆಯ ಕಚೇರಿ ದೂರವಾಣಿ ಸಂಖ್ಯೆ 0821–2438931 ಅನ್ನು ಸಂಪರ್ಕಿಸಬಹುದು.

### ಹುಣ್ಣಿಮೆ ಧರ್ಮ ಸಮಾರಂಭದಲ್ಲಿ ರಂಭಾಪುರಿ ಶ್ರೀ ಆಶೀರ್ವಚನ; ಶಿವದೀಕ್ಷೆ ಸ್ವೀಕರಿಸಿದ ಮಕ್ಕಳು

# ಜೀವನ ಉನ್ನತಿಗೆ ಲೌಕಿಕ: ಪಾರಮಾರ್ಥಿಕ ಜ್ಞಾನ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು

"ಮಾನವ ಜೀವನದ ಉನ್ನತಿ ಹಾಗೂ ಶ್ರೇಯಸ್ಸಿಗೆ ಲೌಕಿಕ ಮತ್ತು ಪಾರಮಾರ್ಥಿಕ ಜ್ಞಾನ ಎರಡೂ ಅತ್ಯಗತ್ಯ," ಎಂದು ಡಾ. ವೀರಸೋಮೇಶ್ವರ ಜಗದ್ಗುರು ಹೇಳಿದರು.

ಶ್ರೀ ಜಗದ್ಗುರು ರಂಭಾಪುರಿ ಪೀಠದಲ್ಲಿ ನಡೆದ ಹುಣ್ಣಿಮೆ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದ ಅವರು, ಜ್ಞಾನವು ಮಾನವಕುಲದ ಅಮೂಲ್ಯ ಸಂಪತ್ತಾಗಿದ್ದು, ಲೌಕಿಕ ಜ್ಞಾನವು ಭೌತಿಕ ಜೀವನಕ್ಕೆ ಅಗತ್ಯವಾದರೆ, ಪಾರಮಾರ್ಥಿಕ ಜ್ಞಾನವು ಆತ್ಮಶಾಂತಿ ಮತ್ತು



ಆಂತರಿಕ ಸಮಾಧಾನಕ್ಕೆ ಮಾರ್ಗದರ್ಶಿಯಾಗುತ್ತದೆ ಎಂದು ತಿಳಿಸಿದರು.

ಸತತ ಶ್ರದ್ಧೆ, ಆಸಕ್ತಿ, ಪರಿಶ್ರಮ ಮತ್ತು ನಿಷ್ಠೆಯಿಂದ ಲೌಕಿಕ ಜ್ಞಾನವನ್ನು ಗಳಿಸಬಹುದು. ಪಾರಮಾರ್ಥಿಕ ಜ್ಞಾನದಿಂದ ಜೀವನದಲ್ಲಿ ಆನಂದ ಹಾಗೂ ಶಾಂತಿ ದೊರೆ–ಯುತ್ತದೆ ಎಂದು ತಿಳಿಸಿದ ಅವರು, ಪಂಚೇಂದ್ರಿಯಗಳ ಚಂಚಲತೆಯಿಂದ ಮನಸ್ಸು ದಾರಿ ತಪ್ಪದಂತೆ ಎಚ್ಚರಿಕೆಯಿಂದ ಬದುಕಬೇಕು ಎಂದು ಸಲಹೆ ನೀಡಿದರು.

ಹುಣ್ಣಿಮೆ ಧರ್ಮ ಸಮಾರಂಭದಲ್ಲಿ 30ಕ್ಕೂ ಹೆಚ್ಚು ಮಕ್ಕಳು ವೀರಶೈವ ಧರ್ಮ ಪರಂಪರೆಯಂತೆ ಶಿವದೀಕ್ಷೆ ಹಾಗೂ ಅಯ್ಯಾಚಾರ ದೀಕ್ಷೆ ಸ್ವೀಕರಿಸಿ ಕೃತಾರ್ಥರಾದರು. ದೀಕ್ಷಾ ಕಾರ್ಯಕ್ರಮದಲ್ಲಿ ರೇಣುಕ ಮಹಾಂತ ಶಿವಾಚಾರ್ಯರು ಹಾಗೂ ದಾರುಕಲಿಂಗ ಶಿವಾಚಾರ್ಯರು ಮಂತ್ರೋಪದೇಶ ನೆರವೇರಿಸಿದರು. ಬೆಳಗಾಲ ಪೇಟೆಯ ಸಿದ್ಧಲಿಂಗಯ್ಯ ಶಾಸ್ತ್ರಿಗಳು ವೈದಿಕ ವಿಧಿವಿಧಾನಗಳನ್ನು ನಡೆಸಿದರು.

ಕಾರ್ಯಕ್ರಮದಲ್ಲಿ ಕ್ಷೇತ್ರದ ದೈವಗಳಿಗೆ ವಿಶೇಷ ಪೂಜೆ ಸಲ್ಲಿಸಲಾಯಿತು.

### ಮೇ 1ರಿಂದ 10ರವರೆಗೆ ನೀರು ಬಿಡುಗಡೆ; ಅನಧಿಕೃತ ಬಳಕೆ ಮಾಡಿದರೆ ಕಾನೂನು ಕ್ರಮ

# ಕಾಲುವೆ ನೀರು ಕೆರೆಗೆ ಮಾತ್ರ: ಜಿಲ್ಲಾಧಿಕಾರಿ ಕಟ್ಟುನಿಟ್ಟಿನ ಆದೇಶ

■ ವಿಜಯಸಾಕ್ಷಿ ಸುದ್ದಿ, ಧಾರವಾಡ



ನವಲಗುಂದ, ಅಣ್ಣಿಗೇರಿ, ಹುಬ್ಬಳ್ಳಿ ಹಾಗೂ ಕುಂದಗೋಳ ತಾಲ್ಲೂಕುಗಳ ವಿವಿಧ ಗ್ರಾಮಗಳ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸುವ ಉದ್ದೇಶದಿಂದ ನವಿಲುತೀರ್ಥ ಜಲಾಶಯದಿಂದ ಮಲಪ್ರಭಾ ಬಲದಂಡೆ ಕಾಲುವೆ ಹಾಗೂ ನರಗುಂದ ಶಾಖಾ ಕಾಲುವೆಗೆ ಮೇ 1ರಿಂದ ಮೇ 10, 2026ರವರೆಗೆ ನೀರು ಬಿಡುಗಡೆ ಮಾಡಲು ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರು ಆದೇಶಿಸಿರುವುದಾಗಿ ಜಿಲ್ಲಾಧಿಕಾರಿ ಸ್ನೇಹಲ್ ಆರ್. ತಿಳಿಸಿದ್ದಾರೆ.

> "ನಿಯಮ ಉಲ್ಲಂಘಿಸಿ ನೀರನ್ನು ಅನಧಿಕೃತವಾಗಿ ಬಳಸಿದರೆ ಪಂಪ್‌ಸೆಟ್‌ಗಳು ಹಾಗೂ ಉಪಕರಣಗಳನ್ನು ಜಪ್ತಿ ಮಾಡಿ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ," ಎಂದು ಜಿಲ್ಲಾಧಿಕಾರಿ ಎಚ್ಚರಿಸಿದ್ದಾರೆ.

> "ಕಾಲುವೆ ನೀರನ್ನು ಕೃಷಿ ಕಾರ್ಯ ಸೇರಿದಂತೆ ಇತರ ಯಾವುದೇ ಉದ್ದೇಶಗಳಿಗೆ ಬಳಸುವುದು ಸಂಪೂರ್ಣವಾಗಿ ನಿಷೇಧಿಸ ಲಾಗಿದೆ," ಎಂದು ಅವರು ಎಚ್ಚರಿಕೆ ನೀಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ನಿಗದಿತ ಅವಧಿಯಲ್ಲಿ ಕಾಲುವೆಗಳ ಮೂಲಕ ಹರಿಯುವ ನೀರನ್ನು ಕೇವಲ ಕುಡಿಯುವ ನೀರಿನ ಕೆರೆಗಳನ್ನು ತುಂಬಿಸುವ ಉದ್ದೇಶಕ್ಕಷ್ಟೇ ಬಳಸಬೇಕು ಎಂದು ಸ್ಪಷ್ಟಪಡಿಸಿದ್ದಾರೆ.

ಈ ಅವಧಿಯಲ್ಲಿ ಅಚ್ಚುಕಟ್ಟು ಪ್ರದೇಶದ ರೈತರು ಹಾಗೂ ಸಾರ್ವಜನಿಕರು ಪಂಪ್‌ಸೆಟ್‌ಗಳು ಸೇರಿದಂತೆ ಯಾವುದೇ ಉಪಕರಣಗಳ ಮೂಲಕ ನೀರನ್ನು ಎತ್ತಿಕೊಳ್ಳಬಾರದು ಎಂದು ಸೂಚಿಸಲಾಗಿದೆ.

ಸಾರ್ವಜನಿಕರು ಹಾಗೂ ರೈತರು ಸಹಕರಿಸಿ ಕುಡಿಯುವ ನೀರಿನ ಅಗತ್ಯತೆ ಪೂರೈಸಲು ಸಹಾಯ ಮಾಡಬೇಕೆಂದು ಮನವಿ ಮಾಡಲಾಗಿದೆ.

# ಕ್ಷಣ, ಸುರಕ್ಷತೆ ಮುಖ್ಯ: ಕಾರ್ಮಿಕರಿಗೆ ಕೃಷ್ಣಗೌಡ ಪಾಟೀಲ ಕರೆ




■ ವಿಜಯಸಾಕ್ಷಿ ಸುದ್ದಿ, ಗದಗ

"ಕಟ್ಟಡ ಕಾರ್ಮಿಕರ ಜೊತೆ ಸದಾ ನಿಲ್ಲುತ್ತೇನೆ. ತಮ್ಮ ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಪ್ರಾಮುಖ್ಯತೆ ನೀಡಬೇಕು. ಜೊತೆಗೆ ಕೆಲಸದ ವೇಳೆ ಸುರಕ್ಷತಾ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಆರೋಗ್ಯ ಕಾಪಾಡಿಕೊಳ್ಳಬೇಕು," ಎಂದು ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಹೇಳಿದರು.

ಕಟ್ಟಡ ನಿರ್ಮಾಣ ಕಾರ್ಮಿಕರ ಮಹಾಸಂಘ ಗದಗ–ಬೆಟಗೇರಿ ವತಿಯಿಂದ ಮೇ 1ರ ಕಾರ್ಮಿಕರ ದಿನಾಚರಣೆಯ ಅಂಗವಾಗಿ ನಗರದ ಡಿ.ಸಿ. ಮಿಲ್ ಕಂಪೌಂಡ್ ಹಳೆಯ ಕೋರ್ಟ್ ಸಮೀಪದ ಕೆ.ಎಚ್. ಪಾಟೀಲ ನಗರದಲ್ಲಿರುವ ಸಂಘದ ಕಚೇರಿಯಲ್ಲಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಕಾರ್ಯಕ್ರಮದ ಆರಂಭದಲ್ಲಿ ಭೂಮರಡ್ಡಿ ಸರ್ಕಲ್‌ನಲ್ಲಿರುವ ಪಂಡಿತ ಪುಟ್ಟರಾಜ ಗವಾಯಿ ಅವರ ಪುತ್ಥಳಿಗೆ ಕೃಷ್ಣಗೌಡ ಪಾಟೀಲ ಹಾಗೂ ಸಂಘದ ಅಧ್ಯಕ್ಷ ಮಾಬುಖಾನ ಪಠಾಣ ಸೇರಿದಂತೆ ಇತರರು ಪುಷ್ಪಾರ್ಚನೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ವತಿಯಿಂದ ಕೃಷ್ಣಗೌಡ ಪಾಟೀಲ ಅವರನ್ನು ಸನ್ಮಾನಿಸಲಾಯಿತು. ಬಳಿಕ ಭೂಮರಡ್ಡಿ ಸರ್ಕಲ್‌ನಿಂದ ಸಂಘದ ಕಚೇರಿವರೆಗೆ ಪಾದಯಾತ್ರೆಗೆ ಚಾಲನೆ ನೀಡಿದರು.

ಸಂಘದ ಅಧ್ಯಕ್ಷ ಮಾಬುಸಾಬ ಪಠಾಣ ಮಾತನಾಡಿ, ಸರ್ಕಾರದಿಂದ ದೊರೆಯುವ ಸೌಲಭ್ಯ ಗಳನ್ನು ಕಾರ್ಮಿಕರು ಸದುಪಯೋಗ ಪಡಿಸಿಕೊಳ್ಳಬೇಕು. ಮಕ್ಕಳನ್ನು ಉತ್ತಮ ವಿದ್ಯಾವಂತರನ್ನಾಗಿ ಮಾಡಲು ಪ್ರಯತ್ನಿಸಬೇಕು ಹಾಗೂ ದುಶ್ಚಟಗಳಿಂದ ದೂರವಿರಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಚನ್ನವೀರಗೌಡ ಕೆ. ಪಾಟೀಲ, ಚಾಂದಸಾಬ ಅಬ್ಬಿಗೇರಿ, ಅಲ್ತಾಫ್ ಅಹ್ಮದ ಕೊಪ್ಪಳ, ಕಲ್ಲೇಶಪ್ಪ ಕುಡಗುಂಟಿ, ಮೈನುದ್ದೀನ್, ಅಡಿವೆಪ್ಪ ಚಲವಾದಿ, ಚಾಂದಸಾಬ ಸೊಲ್ಲಾಪೂರ, ಮಹಮ್ಮದ ಹಳ್ಳಿಕೇರಿ, ಆಸೀಫ್ ಮನ್ನೂರಿ, ನೂರಅಹ್ಮದ ಬಳ್ಳಾರಿ ಸೇರಿದಂತೆ ವಿವಿಧ ಸಂಘಗಳ ಅಧ್ಯಕ್ಷರು, ಪದಾಧಿಕಾರಿಗಳು ಹಾಗೂ ಕಾರ್ಮಿಕರು ಉಪಸ್ಥಿತರಿದ್ದರು.

# ಸರ್ಕಾರಿ ಕಾಲೇಜಿನ ಇಬ್ಬರು ವಿದ್ಯಾರ್ಥಿಗಳು ಇಂಜಿನಿಯರಿಂಗ್ ಹುದ್ದೆಗೆ ಆಯ್ಕೆ

■ ವಿಜಯಸಾಕ್ಷಿ ಸುದ್ದಿ, ನರೇಗಲ್



ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದಲ್ಲಿ ಅಂತಿಮ ವರ್ಷದ ಬಿಸಿಎ ಪದವಿ ಅಧ್ಯಯನ ಮಾಡುತ್ತಿರುವ ಇಬ್ಬರು ವಿದ್ಯಾರ್ಥಿಗಳು ಪುಣೆ ಮೂಲದ ಖಾಸಗಿ ಕಂಪನಿಯಲ್ಲಿ ಇಂಜಿನಿಯರಿಂಗ್ ಹುದ್ದೆಗೆ ಆಯ್ಕೆಯಾಗಿದ್ದಾರೆ.

ಅನ್ನದಾನೇಶ್ವರ ಪದವಿ ಕಾಲೇಜಿನಲ್ಲಿ ಇತ್ತೀಚೆಗೆ ನಡೆದ ಕ್ಯಾಂಪಸ್ ಸಂದರ್ಶನದಲ್ಲಿ ಪಾಲ್ಗೊಂಡಿದ್ದ ಕೋಟೇಶ ಭೂಮೋಜಿ ಮತ್ತು ವಾಗೇಶ ವೀರಾಪುರ ಅವರು ಸಿಎಸ್‌ವಿಎನ್ ಕಾರ್ಪೊರೇಟ್ ಕಂಪನಿಗೆ ಆಯ್ಕೆಯಾಗಿದ್ದಾರೆ. ಇವರಿಗೆ ವಾರ್ಷಿಕ ರೂ. 3.75 ಲಕ್ಷ ಪ್ಯಾಕೇಜ್ ನೀಡಲಾಗಿದೆ ಎಂದು ಪ್ರಾಂಶುಪಾಲ ಎಸ್. ಎಲ್. ಗುಳೇದಗುಡ್ಡ ತಿಳಿಸಿದ್ದಾರೆ.

ಕಾಲೇಜು ಆಡಳಿತ ಮಂಡಳಿ ಹಾಗೂ ಸಿಬ್ಬಂದಿ ವರ್ಗವು ವಿದ್ಯಾರ್ಥಿಗಳ ಸಾಧನೆಯನ್ನು ಶ್ಲಾಘಿಸಿ ಅಭಿನಂದನೆ ಸಲ್ಲಿಸಿದೆ.

# ಶ್ರೀ ರಂಭಾಪುರಿ ಜಗದ್ಗುರುಗಳ ಮೇ ತಿಂಗಳಿನ ಪ್ರವಾಸ ವಿವರ ಪ್ರಕಟ

■ ವಿಜಯಸಾಕ್ಷಿ ಸುದ್ದಿ, ಬಾಳೆಹೊನ್ನೂರು



ಶ್ರೀ ರಂಭಾಪುರಿ ಪೀಠದ ಶ್ರೀ ಡಾ. ವೀರಸೋಮೇಶ್ವರ ಜಗದ್ಗುರುಗಳವರ ಮೇ–2026 ಮಾಹೆಯ ಧಾರ್ಮಿಕ ಪ್ರವಾಸ ಕಾರ್ಯಕ್ರಮವನ್ನು ಪ್ರಕಟಿಸಲಾಗಿದೆ ಎಂದು ಪೀಠದ ವಾರ್ತಾ ಸಂಯೋಜನಾಧಿಕಾರಿ ಸಿ.ಎಚ್. ಬಾಳನಗೌಡ್ರ ತಿಳಿಸಿದ್ದಾರೆ.

ಪ್ರವಾಸದ ಆರಂಭವಾಗಿ ಮೇ 4 ಮತ್ತು 5 ರಂದು ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರಿನಲ್ಲಿ ಪುರ ಪ್ರವೇಶ ಹಾಗೂ ಇಷ್ಟಲಿಂಗ ಮಹಾಪೂಜಾ ಧರ್ಮ ಸಮಾರಂಭ ನಡೆಯಲಿದೆ. ಮೇ 6ರಂದು ಶಿವಮೊಗ್ಗದಲ್ಲಿ ಲಿಂ. ಟಿ.ವಿ. ಈಶ್ವರಯ್ಯನವರ ಶ್ರದ್ಧಾಂಜಲಿ ಸಮಾರಂಭದಲ್ಲಿ ಜಗದ್ಗುರುಗಳು ಭಾಗವಹಿಸಲಿದ್ದಾರೆ.

ಮೇ 7ರಂದು ಗದಗ ಜಿಲ್ಲೆಯ ಲಕ್ಷ್ಮೇಶ್ವರದಲ್ಲಿ ಶ್ರೀ ಹಾಲೇವಾಡಿಮಠದ ರಜತ ಮಹೋತ್ಸವ ಹಾಗೂ ಇಷ್ಟಲಿಂಗ ಮಹಾಪೂಜಾ ನಡೆಯಲಿದೆ. ನಂತರ ಮೇ 9ರಂದು ಶಿಕಾರಿಪುರ ತಾಲೂಕಿನ ಕಡೇನಂದಿಹಳ್ಳಿಯಲ್ಲಿ ಗುರುಪಟ್ಟಾಧಿಕಾರ ಧರ್ಮ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸುವರು.

ಮೇ 10ರಂದು ಗಜೇಂದ್ರಗಡ ತಾಲೂಕಿನ ಸೂಡಿ ಜುಕ್ತಿ ಹಿರೇಮಠದಲ್ಲಿ ಜನಜಾಗೃತಿ ಸಮಾರಂಭ, ಮೇ 11ರಂದು ರಾಣೆಬೆನ್ನೂರು ತಾಲೂಕಿನ ಅರೇಮಲ್ಲಾಪುರದಲ್ಲಿ ಧರ್ಮಜಾಗೃತಿ ಸಮಾರಂಭ ನಡೆಯಲಿದೆ.

ಮೇ 12ರಂದು ರಾಮದುರ್ಗ ತಾಲೂಕಿನ ಎಲಿಕಿತ್ತೂರಿನಲ್ಲಿ ಸರ್ಕಾರಿ ಶಾಲಾ ಕಟ್ಟಡ ಉದ್ಘಾಟನೆ ಹಾಗೂ ಸಂಜೆ ಧಾರವಾಡ ಜಿಲ್ಲೆಯ ನವಲಗುಂದದಲ್ಲಿ ಪುರ ಪ್ರವೇಶ ನಡೆಯಲಿದೆ. ಮೇ 13ರಂದು ನವಲಗುಂದ ಪಂಚಗೃಹ ಹಿರೇಮಠದ ಪಟ್ಟಾಧಿಕಾರ ಸಮಾರಂಭ ಮತ್ತು ಮೇ 14ರಂದು ಶಿವಮೊಗ್ಗದಲ್ಲಿ ಇಷ್ಟಲಿಂಗ ಮಹಾಪೂಜಾ ಜರುಗಲಿದೆ.

ಮೇ 15 ರಿಂದ 17ರ ವರೆಗೆ ಶಿವಮೊಗ್ಗದಲ್ಲಿ ಪಂಚಪೀಠಾಧೀಶ್ವರರ ಯುಗಮಾನೋತ್ಸವ, ಬಸವೇಶ್ವರ ಸ್ವಾಮಿ ಶತಮಾನೋತ್ಸವ ಸೇರಿದಂತೆ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ನಡೆಯಲಿವೆ.

ಮೇ 18ರಂದು ಮಹಾರಾಷ್ಟ್ರದ ಅಣದೂರಿನಲ್ಲಿ ಪಟ್ಟಾಧಿಕಾರದ ರಜತ ಮಹೋತ್ಸವದಲ್ಲಿ ಸಾನ್ನಿಧ್ಯ ವಹಿಸುವರು. ಮೇ 20 ಮತ್ತು 21ರಂದು ಚಡಚಣ ತಾಲೂಕಿನ ಹಾವಿನಹಾಳದಲ್ಲಿ ವರ್ಧಂತಿ ಸಮಾರಂಭ, ಮೇ 22ರಂದು ಯಡ್ರಾಮಿ ತಾಲೂಕಿನ ಬೆಣ್ಣೂರು ಗ್ರಾಮದಲ್ಲಿ ನೂತನ ಮಠ ಉದ್ಘಾಟನೆ ನಡೆಯಲಿದೆ.

ಮೇ 27ರಂದು ಚಿಕ್ಕಮಗಳೂರಿನಲ್ಲಿ ರೇಣುಕ–ಬಸವ ಜಯಂತಿ ಹಾಗೂ ಇಷ್ಟಲಿಂಗ ಮಹಾಪೂಜಾ, ಮೇ 28ರಂದು ಬೇಲೂರು ತಾಲೂಕಿನ ಪಂಡಿತನಹಳ್ಳಿಯಲ್ಲಿ ಹಾಗೂ ಮೇ 29ರಂದು ಶಿವಮೊಗ್ಗದಲ್ಲಿ ಇಷ್ಟಲಿಂಗ ಮಹಾಪೂಜಾ ಕಾರ್ಯಕ್ರಮಗಳು ನಡೆಯಲಿವೆ.

ಮೇ 31ರಂದು ಪೌರ್ಣಿಮೆ ನಿಮಿತ್ತ ಬಾಳೆಹೊನ್ನೂರು ಶ್ರೀ ರಂಭಾಪುರಿ ಪೀಠದಲ್ಲಿ ಜಗದ್ಗುರುಗಳು ವಾಸ್ತವ್ಯವಿದ್ದು ಭಕ್ತರಿಗೆ ದರ್ಶನಾಶೀರ್ವಾದ ನೀಡುವರು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಧರ್ಮಾಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ವಿನಂತಿಸಲಾಗಿದೆ.

## ಗದುಗಿನಲ್ಲಿಂದು ರಾಜ್ಯಮಟ್ಟದ ಕನ್ನಡ ನುಡಿ ಸಿರಿ ಸಾಹಿತ್ಯ ಸಮ್ಮೇಳನ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹಳೆಯ ಕೋರ್ಟ್ ಸಮೀಪದ ಲಯನ್ಸ್ ಭವನದಲ್ಲಿ ಮೇ 3ರಂದು ರವಿವಾರ ಬೆಳಿಗ್ಗೆ 9 ಗಂಟೆಗೆ ರಾಜ್ಯಮಟ್ಟದ "ಕನ್ನಡ ನುಡಿ ಸಿರಿ ಸಾಹಿತ್ಯ ಸಮ್ಮೇಳನ" ಜರುಗಲಿದೆ.

ಧಾರವಾಡದ ಚೇತನ ಫೌಂಡೇಶನ್, ಬೆಂಗಳೂರಿನ ಗಂಧದ ಗುಡಿ ಕನ್ನಡ ಸಂಘ, ಕರ್ನಾಟಕ ರಾಜ್ಯ ಲೇಖಕಿಯರ ಸಂಘ (ಬೆಂಗಳೂರು) ಗದಗ ಜಿಲ್ಲಾ ಘಟಕ ಹಾಗೂ ಶರಣೆ ಅಕ್ಕಮಹಾದೇವಿ ಕದಳಿಶ್ರೀ ವೇದಿಕೆ (ಬೆಂಗಳೂರು) ಗದಗ ಜಿಲ್ಲಾ ಘಟಕದ ಸಂಯುಕ್ತ ಆಶ್ರಯದಲ್ಲಿ ಸಮ್ಮೇಳನ ನಡೆಯಲಿದೆ. ಸಾಹಿತ್ಯಿಕ ಚರ್ಚೆ, ಸಂವಾದ, ಪುಸ್ತಕ ಮೇಳ, ರಾಜ್ಯಮಟ್ಟದ ಕವಿಗೋಷ್ಠಿ, ಪ್ರಶಸ್ತಿ ಪ್ರದಾನ, ಸಾಧಕರಿಗೆ ಸನ್ಮಾನ ಹಾಗೂ ಪ್ರತಿಭಾ ಪುರಸ್ಕಾರ ಕಾರ್ಯಕ್ರಮಗಳು ನಡೆಯಲಿವೆ.

ಮುಂಜಾನೆ 9.15ಕ್ಕೆ ಸಮ್ಮೇಳನದ ಸರ್ವಾಧ್ಯಕ್ಷರಾದ ಸಾಹಿತಿ ಶ್ರೀಮತಿ ರತ್ನಾ ಗಿರೋಸಾ ಬದಿ ಅವರನ್ನು ಮಹಾತ್ಮಾ ಗಾಂಧಿ ವೃತ್ತದಿಂದ ಲಯನ್ಸ್ ಭವನದವರೆಗೆ ಮೆರವಣಿಗೆ ಮೂಲಕ ಕರೆತರಲಾಗುತ್ತದೆ.

ನಂತರ ಹಿರಿಯ ಸಾಹಿತಿ ಡಾ. ಪ್ರಕಾಶ ಖಾಡೆ ಅವರು ಪುಸ್ತಕ ಮೇಳ ಉದ್ಘಾಟಿಸಲಿದ್ದು, ಕನ್ನಡ ಸಾಹಿತ್ಯ ಪರಿಷತ್ತಿನ ಗದಗ ಜಿಲ್ಲಾ ನಿಕಟಪೂರ್ವ ಅಧ್ಯಕ್ಷ ಡಾ. ಶಿವಪ್ಪ ಕುರಿ ಸಮ್ಮೇಳನವನ್ನು ಉದ್ಘಾಟಿಸುವರು.

ಅತಿಥಿಗಳಾಗಿ ವಿವೇಕಾನಂದ ಗುಡಿಮನಿ, ಡಾ. ಪ್ಯಾರಅಲಿ ನೂರಾನಿ, ಜೋಹರಾ ಪೀರಸಾಬ ಕೌತಾಳ, ಚಂಪಾ ಚಂದ್ರಶೇಖರ ಪಾಟೀಲ, ಜಿ.ಎಸ್. ಪಾಟೀಲ ಭಾಗವಹಿಸಲಿದ್ದಾರೆ. ಚೇತನ ಫೌಂಡೇಶನ್ ಅಧ್ಯಕ್ಷ ಚಂದ್ರಶೇಖರ ಮಾಡಲಗೇರಿ ಅಧ್ಯಕ್ಷತೆ ವಹಿಸುವರು.

ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಗಣ್ಯರಿಗೆ "ಕದಳಿಶ್ರೀ" ಹಾಗೂ "ಶರಣಶ್ರೀ" ಪ್ರಶಸ್ತಿಗಳನ್ನು ಪ್ರದಾನ ಮಾಡಲಾಗುತ್ತದೆ.

ಮುಂಜಾನೆ 10.30ಕ್ಕೆ ನಡೆಯುವ ರಾಜ್ಯಮಟ್ಟದ ಕವಿಗೋಷ್ಠಿಗೆ ಶ್ರೀಮತಿ ಶಿವಶಾಂತಾ ಬಿಸನಳ್ಳಿ ಅಧ್ಯಕ್ಷತೆ ವಹಿಸುವರು. ರವಿ ನಾಟೇಕರ ಚಾಲನೆ ನೀಡಲಿದ್ದು, ಪ್ರೊ. ಪ್ರಕಾಶ ಸುಣಗಾರ ಆಶಯ ನುಡಿಗಳನ್ನಾಡುವರು. ರಾಜ್ಯದ ವಿವಿಧ ಭಾಗಗಳಿಂದ ಆಗಮಿಸಿದ ಕವಿಗಳು ಕವನ ವಾಚಿಸಲಿದ್ದಾರೆ.

ಸಮಾರೋಪ ಸಮಾರಂಭಕ್ಕೆ ಬಿ. ರಂಗಸ್ವಾಮಿ ಅಧ್ಯಕ್ಷತೆ ವಹಿಸುವರು. ಶಿವಲಿಂಗಪ್ಪ ಅಣ್ಣಿಗೇರಿ ಸಮಾರೋಪ ನುಡಿಗಳನ್ನಾಡುವರು. ಪ್ರೊ. ಎಲ್.ಬಿ. ಲಕ್ಕಮ್ಮನವರ ನಿರ್ಣಯ ಮಂಡಿಸುವರು.

ಅತಿಥಿಗಳಾಗಿ ಪರ್ವಿನ್ ಭಾನು ಬುಳ್ಳಣ್ಣವರ, ಮಂಜುನಾಥ ಭೀಮಕ್ಕಣ್ಣವರ, ವ್ಹಿ.ವ್ಹಿ. ಹಿರೇಮಠ ಭಾಗವಹಿಸಲಿದ್ದಾರೆ. ಸುಮಾ ಪಾಟೀಲ, ಸುಧಾ ಬೆನಿಕಲ್ ಹಾಗೂ ಸುಜಾತಾ ಪಾಟೀಲ ಸ್ವಾಗತ ಕೋರಿದ್ದಾರೆ.

## ಕ.ಸಾ.ಪ ರೋಣ ತಾಲೂಕ ಘಟಕದ 112ನೇ ಸಂಸ್ಥಾಪನಾ ದಿನಾಚರಣೆ ಮೇ 5ರಂದು

■ವಿಜಯಸಾಕ್ಷಿ ಸುದ್ದಿ, ರೋಣ

ಕನ್ನಡ ಸಾಹಿತ್ಯ ಪರಿಷತ್ತು ರೋಣ ತಾಲೂಕು ಘಟಕದ ವತಿಯಿಂದ 112ನೇ ಸಂಸ್ಥಾಪನಾ ದಿನಾಚರಣೆಯನ್ನು ಮೇ 5ರ ಮಂಗಳವಾರ ತಾಲೂಕು ಕನ್ನಡ ಸಾಹಿತ್ಯ ಭವನದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಕ.ಸಾ.ಪ ತಾಲೂಕು ಘಟಕದ ಅಧ್ಯಕ್ಷ ರಮಾಕಾಂತ ಕ. ಕಮತಗಿ ವಹಿಸಲಿದ್ದು, ಕ್ಷೇತ್ರ ಶಿಕ್ಷಣಾಧಿಕಾರಿ ಎ.ಎನ್. ಕಾಂಬೋಗಿ ಗೌರವ ಉಪಸ್ಥಿತಿ ವಹಿಸಲಿದ್ದಾರೆ. ಬೆಳಿಗ್ಗೆ 11 ಗಂಟೆಗೆ ಆರಂಭವಾಗುವ ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ವಿ.ಕೆ. ಪಾಟೀಲ ಅವರು "ಕನ್ನಡ ಸಾಹಿತ್ಯ ಪರಿಷತ್ತು ನಡೆದು ಬಂದ ದಾರಿ" ವಿಷಯದ ಮೇಲೆ ಉಪನ್ಯಾಸ ನೀಡಲಿದ್ದಾರೆ.

ಈ ಸಂದರ್ಭದಲ್ಲಿ 2025-26ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಪ್ರಥಮ ಭಾಷೆ ಕನ್ನಡ ವಿಷಯದಲ್ಲಿ 125ಕ್ಕೆ 125 ಅಂಕ ಗಳಿಸಿದ ವಿದ್ಯಾರ್ಥಿಗಳಾದ ಸಹನಾ ಕಲ್ಲನಗೌಡ್ರ (ಅಬ್ಬಿಗೇರಿ), ಪ್ರಿಯಾಂಕಾ ಕೊಂಗವಾಡ (ಯಾವಗಲ್ಲ), ಕಾವೇರಿ ಭೀಮನಗೌಡ (ಮಾಡಲಗೇರಿ), ಸಹನಾ ಡೊಳ್ಳಿನ (ಹಿರೇಹಾಳ) ಹಾಗೂ ಮೇಘನಾ ಮುಧೋಳ (ರೋಣ) ಅವರನ್ನು ಸನ್ಮಾನಿಸಲಾಗುತ್ತದೆ.

ಇದೇ ವೇಳೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಂಗಮೇಶ ಮೆಣಸಗಿ (ಪತ್ರಿಕೋದ್ಯಮ), ಯಲ್ಲಪ್ಪಗೌಡ ಕೆಂಚನಗೌಡ್ರ (ಭಜನಾ ಗೀತೆ), ಶಿವಯೋಗಿ ನೀಲಗುಂದ (ಜನಪದ ಗಾಯನ), ಶಿವಾನಂದ ಹುನಗುಂಡಿ (ಸಾಹಿತ್ಯ) ಹಾಗೂ ವೀರಪ್ಪ ಪಲ್ಲೇದ (ಭಕ್ತಿ ಗೀತೆ) ಅವರನ್ನು ಗೌರವಿಸಲಾಗುತ್ತದೆ.

ಕಾರ್ಯಕ್ರಮದಲ್ಲಿ ಸಂಘಟನಾ ಕಾರ್ಯದರ್ಶಿ ಪಿ.ಬಿ. ಪಾಟೀಲ, ಕಾರ್ಯದರ್ಶಿಗಳಾದ ಡಾ. ಶಿವಪ್ರಕಾಶ ಹಿರೇಮಠ ಹಾಗೂ ಎಸ್.ಟಿ. ವಾಲ್ಮೀಕಿ ಸೇರಿದಂತೆ ಕಾರ್ಯಕಾರಿ ಮಂಡಳಿ ಸದಸ್ಯರು, ಆಜೀವ ಸದಸ್ಯರು ಹಾಗೂ ಕನ್ನಡಾಭಿಮಾನಿಗಳು ಭಾಗವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

### ಪುರಾತತ್ವ ವೈಭವದಿಂದ ದೇಶದ ಗಮನ ಸೆಳೆದ ಲಕ್ಕುಂಡಿ ಜಾಗತಿಕ ಗುರುತಿನತ್ತ ಹೆಜ್ಜೆ- ಬಸವರಾಜ ಹೊರಟ್ಟಿ

# ಲಕ್ಕುಂಡಿ ವಿಶ್ವ ಪಾರಂಪರಿಕ ಪಟ್ಟಿಗೆ ದಾಪುಗಾಲು

■ವಿಜಯಸಾಕ್ಷಿ ಸುದ್ದಿ, ಗದಗ

ಇತಿಹಾಸ ಪ್ರಸಿದ್ಧ ಲಕ್ಕುಂಡಿಯ ಗತ ವೈಭವವನ್ನು ಕಂಡಾಗ ಬಿಸಿಲು, ಸೆಕೆ ಯಾವುದೂ ಅನಿಸದೇ ಹೆಮ್ಮೆಯ ಭಾವನೆ ಮೂಡುತ್ತದೆ. ಲಕ್ಕುಂಡಿ ವಿಶ್ವ ಪಾರಂಪರಿಕ ಪಟ್ಟಿಗೆ ಆದಷ್ಟು ಬೇಗ ಸೇರಲಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.



ಲಕ್ಕುಂಡಿಯಲ್ಲಿ ಶನಿವಾರ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ ಪತ್ತೆಯಾದ ಪುರಾತತ್ವ ವಸ್ತುಗಳು ಮತ್ತು ಬಂಗಾರದ ನಾಣ್ಯಗಳ ಘಟನೆ ಬಳಿಕ ಲಕ್ಕುಂಡಿ ರಾಜ್ಯದಷ್ಟೇ ಅಲ್ಲದೆ ದೇಶದ ಗಮನ ಸೆಳೆದಿದೆ. ಈ ಹಿಂದೆ ಕೇವಲ ಹಾದು ಹೋಗುವ ಸ್ಥಳವೆಂದು ಭಾವಿಸಿದ್ದ ಲಕ್ಕುಂಡಿ, ಈಗ ತನ್ನ ಐತಿಹಾಸಿಕ ಮಹತ್ವವನ್ನು ಜಗತ್ತಿಗೆ ತೋರಿಸುತ್ತಿದೆ ಎಂದು ತಿಳಿಸಿದರು.

ಸಚಿವ ಎಚ್.ಕೆ ಪಾಟೀಲ ಅವರ ಪ್ರಯತ್ನಗಳಿಂದ ಲಕ್ಕುಂಡಿಯ ಇತಿಹಾಸ ಜನರಿಗೆ ಪರಿಚಿತವಾಗಿದ್ದು, ಈ ಕಾರ್ಯ ಎಲ್ಲರೂ ಹೆಮ್ಮೆ ಪಡುವಂತಹದ್ದು. ಲಕ್ಕುಂಡಿಯ ಶಿಲ್ಪಕಲೆ, ದೇವಾಲಯಗಳು, ಕೆರೆಗಳು ಹಾಗೂ ಪ್ರಾಚೀನ ನಿರ್ಮಾಣಗಳು ಅಚ್ಚರಿ ಮೂಡಿಸುವಂತಿವೆ. ಇಂದಿನ ತಂತ್ರಜ್ಞಾನದಲ್ಲಿಯೂ ಸಾಧ್ಯವಿಲ್ಲವೆನ್ನಿಸುವ ಸೂಕ್ಷ್ಮ ಶಿಲ್ಪಗಳನ್ನು ಆಗಿನ ಕಾಲದಲ್ಲಿ ನಿರ್ಮಿಸಿರುವುದು ಅಚ್ಚರಿಯ ಸಂಗತಿ. ಇದು ನಮ್ಮ ಪೂರ್ವಜರ ಕೌಶಲ್ಯಕ್ಕೆ ಸಾಕ್ಷಿ ಎಂದು ಹೇಳಿದರು.

ಉತ್ತರ ಕರ್ನಾಟಕದ ಅಭಿವೃದ್ಧಿಗೆ ಎಲ್ಲರೂ ಪಕ್ಷಾತೀತವಾಗಿ ಒಟ್ಟಾಗಿ ಕೆಲಸ ಮಾಡಬೇಕು. ಲಕ್ಕುಂಡಿಯಂತಹ ಪುರಾತತ್ವ ಸಂಪತ್ತು ಪ್ರದೇಶದ ಅಭಿವೃದ್ಧಿಗೆ ದಾರಿ ತೋರಿಸಬಲ್ಲದು. ಈ ಹಿನ್ನೆಲೆಯಲ್ಲಿ ಲಕ್ಕುಂಡಿಯನ್ನು ರಾಷ್ಟ್ರಮಟ್ಟದಲ್ಲಿ ಇನ್ನಷ್ಟು ಗುರುತಿಸುವ ಕೆಲಸ ನಡೆಯಬೇಕು ಎಂದು ಹೇಳಿದರು.

ಗ್ರಾಮಸ್ಥರು ತಮ್ಮ ಬಳಿ ಸಿಗುವ ಪುರಾತತ್ವ ವಸ್ತುಗಳನ್ನು ಸರ್ಕಾರಕ್ಕೆ ಒಪ್ಪಿಸುತ್ತಿರುವುದು ಅಪೂರ್ವ ಉದಾಹರಣೆ. ಇಂತಹ ಹೃದಯ ಶ್ರೀಮಂತಿಕೆ ಎಲ್ಲೆಡೆ ಕಾಣುವುದಿಲ್ಲ. ಲಕ್ಕುಂಡಿಯ ಕೆರೆಗಳು, ದೇವಾಲಯಗಳು ಹಾಗೂ ಪುರಾತತ್ವ ಸ್ಮಾರಕಗಳನ್ನು ಅಭಿವೃದ್ಧಿಪಡಿಸಿ, ದೇಶಕ್ಕೆ ಮಾದರಿಯಾದ ಪುರಾತತ್ವ ಕೇಂದ್ರವನ್ನಾಗಿ ರೂಪಿಸಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ, ಶಾಸಕ ಸಿ.ಸಿ ಪಾಟೀಲ, ರಾಜ್ಯ ವೀಕೆಂದ್ರಿಕಾರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿಯ ಉಪಾಧ್ಯಕ್ಷ ಡಿ. ಆರ್. ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ್ ಬಬರ್ಚಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ. ಬಿ. ಅಸೂಟಿ, ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಪುರಾತತ್ವ ಇಲಾಖೆ ಆಯುಕ್ತ ಎ. ದೇವರಾಜು, ಲಕ್ಕುಂಡಿ ಪ್ರಾಧಿಕಾರ ಆಯುಕ್ತ ಡಾ. ಶರಣು ಗೋಗೇರಿ, ಜಿಪಂ ಉಪಕಾರ್ಯದರ್ಶಿ ಸಿ. ಆರ್. ಮುಂಡರಗಿ, ಉಪ ವಿಭಾಗಾಧಿಕಾರಿ ಎಂ. ಗಂಗಪ್ಪ, ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕ ಕೊಟ್ರೇಶ ವಿಭೂತಿ, ಸಲಹಾ ಸಮಿತಿ ಸದಸ್ಯರಾದ ಜಿ. ಸಿ. ಬೆಟಸೂರುಮಠ, ಸಿದ್ದು ಪಾಟೀಲ, ಗೀತಾಂಜಲಿ ರಾವ, ಅ. ದ. ಕಟ್ಟಿಮನಿ, ಇಒ ಎಚ್. ಎಸ್. ಜಿನಗಾ, ಪಿಡಿಒ ಅಮೀರ ನಾಯಕ, ಬಸವರಾಜ ಕಡೆಮನಿ, ವಾಸಣ್ಣ ಕುರಡಗಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

> "ಲಕ್ಕುಂಡಿಯಂತಹ ಪುರಾತತ್ವ ಸಂಪತ್ತು ಜಾಗತಿಕ ಮಟ್ಟದಲ್ಲಿ ಗುರುತಿಸಬೇಕು; ಇದು ನಮ್ಮ ಹೆಮ್ಮೆ."
> – **ಬಸವರಾಜ ಹೊರಟ್ಟಿ,** ಸಭಾಪತಿಗಳು, ವಿಧಾನ ಪರಿಷತ್

### ವಿದ್ಯಾರ್ಥಿಗಳ ಭವಿಷ್ಯಕ್ಕೆ ದಾರಿ ತೋರಿಸಿದ ಜಾಗೃತಿ ವೇದಿಕೆಯಲ್ಲಿ ಶಂಕರ್ ಹಲಗತ್ತಿ

# ಹದಿಹರೆಯದಲ್ಲಿ ಸರಿಯಾದ ಮಾರ್ಗದರ್ಶನ ಅಗತ್ಯ



■ವಿಜಯಸಾಕ್ಷಿ ಸುದ್ದಿ, ಕಲಘಟಗಿ

ಹದಿಹರೆಯವು ವಿದ್ಯಾರ್ಥಿ ಜೀವನದ ವಸಂತಕಾಲವಾಗಿದ್ದು, ಈ ಅವಧಿಯಲ್ಲಿ ಪಾಲಕರು ಮತ್ತು ಶಿಕ್ಷಕರು ವಿದ್ಯಾರ್ಥಿಗಳಿಗೆ ಸರಿಯಾದ ಮಾರ್ಗದರ್ಶನ ನೀಡುವುದು ಅತ್ಯಂತ ಅಗತ್ಯವೆಂದು ಕ.ವಿ.ವ. ಸಂಘದ ಪ್ರಧಾನ ಕಾರ್ಯದರ್ಶಿ ಶಂಕರ ಹಲಗತ್ತಿ ಹೇಳಿದರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘದ ಶಿಕ್ಷಣ ಮಂಟಪದಿಂದ ಕಲಘಟಗಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ್ದ 'ಹದಿಹರೆಯದ ಸಮಸ್ಯೆಗಳು ಹಾಗೂ ಪರಿಹಾರ' ಕುರಿತ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಹದಿಹರೆಯದಲ್ಲಿ ವಿದ್ಯಾರ್ಥಿಗಳಲ್ಲಿ ಶಾರೀರಿಕ ಮತ್ತು ಭಾವನಾತ್ಮಕ ಬದಲಾವಣೆಗಳು ಸಂಭವಿಸುತ್ತವೆ. ಇದರಿಂದ ಆತಂಕ, ಖಿನ್ನತೆ ಮೊದಲಾದ ಸಮಸ್ಯೆಗಳು ಎದುರಾಗಬಹುದು. ಈ ಅವಧಿಯಲ್ಲಿ ದಾರಿ ತಪ್ಪುವ ಸಾಧ್ಯತೆಗಳು ಹೆಚ್ಚಿದ್ದು, ಸ್ನೇಹಿತರ ಒತ್ತಡದಿಂದ ದುಶ್ಚಟಗಳಿಗೆ ಒಳಗಾಗುವ ಅಪಾಯವೂ ಇದೆ. ಕಲಿಕೆಯಲ್ಲಿ ನಿರಾಸಕ್ತಿ, ಭಾವೋದ್ವೇಗ, ಹಿಂಸಾಚಾರ ಹಾಗೂ ಸಮಾಜ ವಿರೋಧಿ ಚಟುವಟಿಕೆಗಳತ್ತ ಒಲವು ಹೆಚ್ಚಾಗಬಹುದು ಎಂದು ಅವರು ತಿಳಿಸಿದರು. ವಿದ್ಯಾರ್ಥಿಗಳಲ್ಲಿರುವ ಅಪಾರ ಶಕ್ತಿಯನ್ನು ಸದುಪಯೋಗಪಡಿಸಿಕೊಂಡು ಸಾಧನೆಯ ದಾರಿಯಲ್ಲಿ ಸಾಗಬೇಕು ಎಂದು ಸಲಹೆ ನೀಡಿದರು.

ಕ.ವಿ.ವ. ಸಂಘದ ಶಿಕ್ಷಣ ಮಂಟಪದ ಸಂಚಾಲಕ ವೀರಣ್ಣ ಒಡ್ಡಿನ ಮಾತನಾಡಿ, ವಿದ್ಯಾರ್ಥಿಗಳು ದೇಶದ ನಿಜವಾದ ಸಂಪತ್ತಾಗಿದ್ದು, ಹದಿಹರೆಯವು ಜೀವನದ ಪ್ರಕ್ಷುಬ್ಧ ಅವಧಿಯಾಗಿದೆ. ಈ ಸಂದರ್ಭದಲ್ಲಿ ಗೊಂದಲಗಳಿಗೆ ಒಳಗಾಗದೆ ಉತ್ತಮ ಹವ್ಯಾಸಗಳನ್ನು ಬೆಳೆಸಿಕೊಂಡು ಜವಾಬ್ದಾರಿಯುತ ಪ್ರಜೆಗಳಾಗಬೇಕು ಎಂದು ಹೇಳಿದರು.

ಹದಿಹರೆಯದ ಮನೋ ತಜ್ಞರಾದ ಡಾ. ಸುಜ್ಞಾನಿದೇವಿ ಪಾಟೀಲ ಅವರು ಸಂವಾದಾತ್ಮಕ ಚಟುವಟಿಕೆಗಳ ಮೂಲಕ ಹದಿಹರೆಯದ ಸಮಸ್ಯೆಗಳು ಮತ್ತು ಅವುಗಳ ಪರಿಹಾರಗಳ ಕುರಿತು ಪ್ರಾಯೋಗಿಕ ಉಪನ್ಯಾಸ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಕಾಲೇಜಿನ ಪ್ರಾಚಾರ್ಯರಾದ ಪ್ರೊ. ಎನ್. ಎಂ. ಸಂಗಮನವರ ಮಾತನಾಡಿ, ಕ.ವಿ.ವ. ಸಂಘದ ಶಿಕ್ಷಣ ಮಂಟಪ ಆಯೋಜಿಸಿದ ಈ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಸಕಾರಾತ್ಮಕ ಪರಿಣಾಮ ಬೀರಲಿದೆ ಹಾಗೂ ಅವರ ವ್ಯಕ್ತಿತ್ವ ನಿರ್ಮಾಣಕ್ಕೆ ಸಹಕಾರಿಯಾಗಲಿದೆ ಎಂದು ಹೇಳಿದರು.

ವೇದಿಕೆಯಲ್ಲಿ ಕ.ವಿ.ವ. ಸಂಘದ ಕಾರ್ಯಕಾರಿ ಸಮಿತಿ ಸದಸ್ಯರಾದ ಡಾ. ಮಹೇಶ್ ಧ. ಹೊರಕೇರಿ ಉಪಸ್ಥಿತರಿದ್ದರು. ಪ್ರೊ. ಕೆ.ಎಸ್. ಪಾಟೀಲ ಸೇರಿದಂತೆ ಕಾಲೇಜಿನ ಪ್ರಾಧ್ಯಾಪಕರು ಹಾಗೂ ಸಿಬ್ಬಂದಿ ಭಾಗವಹಿಸಿದ್ದರು. ಪ್ರೊ. ಮಂಜುನಾಥ ಕುರಿ ಕಾರ್ಯಕ್ರಮವನ್ನು ಸಂಯೋಜಿಸಿದರು.

> "ಹದಿಹರೆಯವು ವಿದ್ಯಾರ್ಥಿ ಜೀವನದ ಅತ್ಯಂತ ಸೂಕ್ಷ್ಮ ಹಂತ. ಈ ಅವಧಿಯಲ್ಲಿ ಸರಿಯಾದ ಮಾರ್ಗದರ್ಶನ ಸಿಕ್ಕರೆ ಅವರು ಸಾಧನೆಯ ದಾರಿಯಲ್ಲಿ ಸಾಗುತ್ತಾರೆ; ಇಲ್ಲದಿದ್ದರೆ ದಾರಿ ತಪ್ಪುವ ಸಾಧ್ಯತೆ ಹೆಚ್ಚು."
> – **ಶಂಕರ ಹಲಗತ್ತಿ**

## ಚಾಂಪಿಯನ್ ಪಟ್ಟ ಅಲಂಕರಿಸಿದ ಎಲೈಟ್ ಇಲೆವೆನ್

▶▶ಮೊದಲನೇ ಪುಟದಿಂದ

ಪ್ರೇಮ್ ಬಿ. ಶೂನ್ಯಕ್ಕೆ ಔಟಾದರೆ, ಬಾಲಿಂಗ್‌ನಲ್ಲಿ ಅದ್ಭುತ ಪ್ರದರ್ಶನ ನೀಡಿದ್ದ ನಿಹಾಲ್ ಆಕಾಶ್ 18 ಎಸೆತಗಳಲ್ಲಿ 3 ಫೋರ್ ಹಾಗೂ 1 ಸಿಕ್ಸರ್ ಸಹಿತ 27 ರನ್ ಗಳಿಸಿದರು. ಸಂತೋಷ ನಾಯಕ 5 ಹಾಗೂ ಜಗದೀಶರಡ್ಡಿ 8 ರನ್ ಗಳಿಸಿ ತಂಡಕ್ಕೆ ಗೆಲುವು ತಂದುಕೊಟ್ಟರು.

ಸ್ಟ್ರೈಕರ್ಸ್ ತಂಡದ ಪರವಾಗಿ ಆರೀಫ್ 2 ಓವರ್‌ಗಳಲ್ಲಿ 13 ರನ್ ನೀಡಿ 1 ವಿಕೆಟ್ ಪಡೆದರು. ಉಳಿದಂತೆ ಅಕ್ಷಯ ಲಮಾಣಿ ಹಾಗೂ ಅಲ್ತಾಮಾಶ್ ತಲಾ ಒಂದು ವಿಕೆಟ್ ಪಡೆದರು. ಬ್ಯಾಟಿಂಗ್ ಹಾಗೂ ಬಾಲಿಂಗ್‌ನಲ್ಲಿ ಉತ್ತಮ ಪ್ರದರ್ಶನ ನೀಡಿದ ಆಲ್‌ರೌಂಡರ್ ನಿಹಾಲ್ ಆಕಾಶ್ ಪಂದ್ಯಶ್ರೇಷ್ಠ ಪ್ರಶಸ್ತಿಗೆ ಭಾಜನರಾದರು. ಸ್ಟ್ರೈಕರ್ಸ್ ತಂಡದ ತಯ್ಯಬ್ ಉತ್ತಮ ಬ್ಯಾಟರ್ ಎನಿಸಿದರೆ, ಎಲೈಟ್ ಇಲೆವೆನ್ ತಂಡದ ಶಿವು ಉತ್ತಮ ಬಾಲರ್ ಎನಿಸಿದರು. ನಂತರ ಪಂದ್ಯಾವಳಿ ವೀಕ್ಷಣೆಗೆ ಆಗಮಿಸಿದ್ದ ಕಾನೂನು, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಅವರು ವಿಜೇತ ಹಾಗೂ ರನ್ನರ್ ಅಪ್ ತಂಡಗಳಿಗೆ ಟ್ರೋಫಿ ವಿತರಿಸಿದರು. ವಿಜೇತ ಎಲೈಟ್ ಇಲೆವೆನ್ ತಂಡ ರೂ 1.50 ಲಕ್ಷ ನಗದು ಬಹುಮಾನ ಸಹಿತ ಟ್ರೋಫಿ ಪಡೆದುಕೊಂಡಿತು.

## ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಬಳಕೆ: ದಂಡ ರೂ.1000ಕ್ಕೆ ಏರಿಕೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ



ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಉತ್ಪನ್ನಗಳ ಬಳಕೆಗೆ ವಿಧಿಸಲಾಗುತ್ತಿದ್ದ ದಂಡವನ್ನು ರೂ. 200ರಿಂದ ರೂ. 1000ಕ್ಕೆ ಹೆಚ್ಚಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ ತಿಳಿಸಿದ್ದಾರೆ.

ಸಿಗರೇಟು ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹಿರಾತು ನಿಷೇಧ ಹಾಗೂ ವ್ಯಾಪಾರ, ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ನಿಯಂತ್ರಣ) ಕರ್ನಾಟಕ ತಿದ್ದುಪಡಿ ಅಧಿನಿಯಮ,

2024ರ ಅನ್ವಯ ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ಬಳಕೆ ಸಂಪೂರ್ಣ ನಿಷೇಧಿಸಲಾಗಿದೆ. ನಿಯಮ ಉಲ್ಲಂಘಿಸಿದರೆ ರೂ 1000ರವರೆಗೆ ದಂಡ ವಿಧಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹುಕ್ಕಾ ಬಾರ್‌ಗಳ ನಡೆಸುವಿಕೆಗೆ ಸಂಬಂಧಿಸಿದ ನಿಯಮಗಳನ್ನು ಉಲ್ಲಂಘಿಸಿದಲ್ಲಿ ಒಂದು ವರ್ಷದಿಂದ ಮೂರು ವರ್ಷಗಳವರೆಗೆ ಜೈಲು ಶಿಕ್ಷೆ ಹಾಗೂ ರೂ 50,000ರಿಂದ ರೂ 1 ಲಕ್ಷದವರೆಗೆ ದಂಡ ವಿಧಿಸುವ ಸಾಧ್ಯತೆ ಇದೆ ಎಂದು ಎಚ್ಚರಿಕೆ ನೀಡಲಾಗಿದೆ. ಇದಲ್ಲದೆ, 21 ವರ್ಷಕ್ಕಿಂತ ಕಡಿಮೆ ವಯಸ್ಸಿನವರಿಗೆ ತಂಬಾಕು ಉತ್ಪನ್ನಗಳ ಮಾರಾಟ ನಿಷೇಧವಾಗಿದ್ದು, ಯಾವುದೇ ಶಿಕ್ಷಣ ಸಂಸ್ಥೆಯ 100 ಮೀಟರ್ ವ್ಯಾಪ್ತಿಯೊಳಗೆ ತಂಬಾಕು ಮಾರಾಟಕ್ಕೂ ಕಟ್ಟುನಿಟ್ಟಿನ ನಿರ್ಬಂಧವಿದೆ. ಈ ನಿಯಮ ಉಲ್ಲಂಘಿಸಿದರೆ ರೂ 1000ರವರೆಗೆ ದಂಡ ವಿಧಿಸಲಾಗುತ್ತದೆ. ಸಾರ್ವಜನಿಕರು ಕಾನೂನು ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ಆರೋಗ್ಯಕರ ಸಮಾಜ ನಿರ್ಮಾಣಕ್ಕೆ ಸಹಕರಿಸಬೇಕು ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಮನವಿ ಮಾಡಿದ್ದಾರೆ.

### ಕಾಂಗ್ರೆಸ್ ಕಚೇರಿಯಲ್ಲಿ ಪತ್ರಿಕಾಗೋಷ್ಠಿ; ಅಭಿವೃದ್ಧಿ ಕಾಮಗಾರಿಗಳಲ್ಲಿ ಭ್ರಷ್ಟಾಚಾರದ ಆರೋಪ ಮಾಡಿದ ಭೀಮಾನಾಯ್ಕ

# ಶಾಸಕ ನೇಮಿರಾಜ್ ನಾಯ್ಕ ವಿರುದ್ಧ 30% ಕಮಿಷನ್ ಆರೋಪ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಪುರಸಭೆಯ ನೂತನ ಅಧ್ಯಕ್ಷೆಯಾಗಿ ಆಯ್ಕೆಯಾದ ರೇಷ್ಮಾ ಸಿಕಂದರ್ ಅವರಿಗೆ ಅಭಿನಂದನೆ ಸಲ್ಲಿಸಿದ ಬಳಿಕ, ಹಾಲಿ ಶಾಸಕ ನೇಮಿರಾಜ್ ನಾಯ್ಕ ವಿರುದ್ಧ ಗಂಭೀರ ಆರೋಪಗಳನ್ನು ಮಾಜಿ ಶಾಸಕ ಭೀಮಾನಾಯ್ಕ ಮಾಡಿದ್ದಾರೆ.

ಪಟ್ಟಣದ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಅಭಿನಂದನಾ ಕಾರ್ಯಕ್ರಮ ಹಾಗೂ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಶಾಸಕರು ಜನರ ಸಹಾಯದಿಂದ ಅಧಿಕಾರಕ್ಕೆ ಬಂದ ಬಳಿಕ ಜನರನ್ನೇ ಮರೆತು, ಅಭಿವೃದ್ಧಿ ಕಾಮಗಾರಿಗಳಲ್ಲಿ 30% ಕಮಿಷನ್ ಪಡೆಯುತ್ತಿದ್ದಾರೆ ಎಂದು ಆರೋಪಿಸಿದರು.

2016ಕ್ಕೂ ಮೊದಲು ಚಿಂತರಪಳ್ಳಿ ಮತ್ತು ಹಗರಿಬೊಮ್ಮನಹಳ್ಳಿ ಗ್ರಾಮಪಂಚಾಯಿತಿಗಳು ದೇಶದಲ್ಲೇ ಅತಿ ದೊಡ್ಡ ಪಂಚಾಯಿತಿಗಳಾಗಿದ್ದು (82 ಸದಸ್ಯರು), ಅವುಗಳನ್ನು ತಮ್ಮ ಅವಧಿಯಲ್ಲಿ ರಾಜಕೀಯ ಇಚ್ಛಾಶಕ್ತಿಯಿಂದ ಪುರಸಭೆಯಾಗಿ ಮೇಲ್ದರ್ಜೆಗೆ ಏರಿಸಲಾಗಿದೆ ಎಂದರು. ಆ ನಂತರದಿಂದ ಹಗರಿಬೊಮ್ಮನಹಳ್ಳಿ ಪುರಸಭೆಯಲ್ಲಿ ಜೋಗಿ ಹನುಮಂತಪ್ಪರಿಂದ ರೇಷ್ಮಾ ಸಿಕಂದರ್‌ವರೆಗೆ ಐದು ಕಾಂಗ್ರೆಸ್ ಅಧ್ಯಕ್ಷರು ಆಯ್ಕೆಯಾಗಿದ್ದಾರೆ ಎಂದು ಹೇಳಿದರು.




ಹೆಬಿಟೇಟ್ ಕಂಪನಿಗೆ ಸುಮಾರು ರೂ. 200 ಕೋಟಿ ಅನುದಾನ ನೀಡಲಾಗಿದ್ದು, ಅದರಲ್ಲಿ ರೂ. 100 ಕೋಟಿ ಕಮಿಷನ್ ಪಡೆದಿರುವ ಆರೋಪವಿದೆ ಎಂದು ಹೇಳಿದರು. ಕ್ಷೇತ್ರಕ್ಕೆ ಬಂದ ರೂ. 25 ಕೋಟಿ ಅನುದಾನದಲ್ಲಿ ಬಹುಪಾಲು ಕೊಟ್ಟೂರು ಭಾಗಕ್ಕೆ ಮೀಸಲಿಟ್ಟಿದ್ದಾರೆ ಎಂದು ದೂರಿದರು. ವಿವಿಧ ಯೋಜನೆಗಳಿಂದ ಬಂದ ಸುಮಾರು ರೂ.500 ಕೋಟಿ ಅನುದಾನ ಸರಿಯಾಗಿ ಬಳಕೆಯಾಗಿಲ್ಲ ಎಂದೂ ಆರೋಪಿಸಿದರು.

ಜಾಗಟಗೆರೆ-ರಾಮಪುರ ರಸ್ತೆ ಮೂರು ತಿಂಗಳಲ್ಲಿ ಹಾಳಾಗಿರುವುದು, ಮನೆ ಇಲ್ಲದ ಪ್ರದೇಶಗಳಲ್ಲಿ ಸಿಸಿ ರಸ್ತೆ ನಿರ್ಮಿಸಿರುವುದು ಸೇರಿದಂತೆ ಹಲವು ಉದಾಹರಣೆಗಳನ್ನು ಅವರು ನೀಡಿದರು. ಮಾಲವಿ ಜಲಾಶಯದ ಗೇಟ್ ಅಳವಡಿಕೆ ಕಾಮಗಾರಿಯಲ್ಲಿ ಕೂಡ 30% ಕಮಿಷನ್ ಬೇಡಿಕೆಯ ಕಾರಣ ಕೆಲಸ ವಿಳಂಬವಾಗಿದೆ ಎಂದು ಹೇಳಿದರು. ಈ ಎಲ್ಲ ವಿಷಯಗಳನ್ನು ಪರಿಶೀಲಿಸಿ ಲೋಕಾಯುಕ್ತರಿಗೆ ದೂರು ನೀಡಲಾಗುವುದು ಎಂದು ಎಚ್ಚರಿಸಿದರು.

> "ಅಭಿವೃದ್ಧಿ ಕಾಮಗಾರಿಗಳಲ್ಲಿ ಮುಂಗಡವಾಗಿ 30% ಕಮಿಷನ್ ಪಡೆದು ಕೆಲಸ ಮಾಡಲಾಗುತ್ತಿದೆ."
> – **ಮಾಜಿ ಶಾಸಕ ಭೀಮಾನಾಯ್ಕ**

ಈ ಸಂದರ್ಭದಲ್ಲಿ ಜಿಲ್ಲಾ ಮಹಿಳಾ ಕಾಂಗ್ರೆಸ್ ಅಧ್ಯಕ್ಷೆ ಡಾ. ಸಾಹಿರಾಬಾನು, ಜಿಲ್ಲಾ ಪಂಚಾಯತ್ ಮಾಜಿ ಸದಸ್ಯ ಅಕ್ಕಿ ತೋಟೇಶ, ಕಾಂಗ್ರೆಸ್ ಮುಖಂಡರಾದ ಬಿ. ಚಂದ್ರಪ್ಪ, ನಿಕಟಪೂರ್ವ ಪುರಸಭೆ ಅಧ್ಯಕ್ಷ ಎಂ. ಮರಿರಾಮಪ್ಪ, ಹಾಲ್ದಾಳ್ ವಿಜಯಕುಮಾರ್, ಹಿರಿಯ ಕಾಂಗ್ರೆಸ್ಸಿಗ ಹೆಗ್ಡಾಳ್, ಡಿಶ್ ಮಂಜುನಾಥ್, ರಾಮಣ್ಣ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೋರಿಗೋಣಿಬಸಪ್ಪ, ಪುರಸಭಾ ಸದಸ್ಯ ಪವಾಡಿ ಹನುಮಂತಪ್ಪ, ಸೆರೆಗಾರ ಹುಚ್ಚಪ್ಪ, ಬಾಲಕೃಷ್ಣ ಬಾಬು, ಕರ್ಕಿಹಳ್ಳಿ ಚಂದ್ರಪ್ಪ, ಕೆಜಿಎನ್ ಅಲ್ಲಭಕ್ಷಿ, ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗುರುಬಸವರಾಜ ಸೊನ್ನದ, ಆರ್.ಎಸ್.ಎಸ್. ಎನ್. ಅಧ್ಯಕ್ಷ ದಾದಮ್ಮನವರ ಬಸವರಾಜ್, ತಾಲೂಕು ಪಂಚಾಯತ್ ಮಾಜಿ ಸದಸ್ಯ ಆರ್. ವೆಂಕಟೇಶ ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಉಪಸ್ಥಿತರಿದ್ದರು.

ಕರ್ನಾಟಕ ಸರಕಾರ
**ಕೃಷಿ ಮಾರಾಟ ಇಲಾಖೆ**
**ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ, ಮುಂಡರಗಿ**
ಜಿಲ್ಲೆ: ಗದಗ ಸ್ಥಾಪನೆ: 1959
E-mail : apmc.mundargi1@gmail.com ದೂರವಾಣಿ :08371-262236
ಕ್ರ.ಸಂ:ಕೃಉಮಾಸ(ಮುಂ):ವಾ.ವಿ:36:2026-27 ದಿನಾಂಕ : 02/05/2026

**ಟೆಂಡರ್-ಕಂ-ಬಹಿರಂಗ ಹರಾಜು ಪ್ರಕಟಣೆ 2ನೇ ಕರೆ**

ಈ ಮೂಲಕ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ಈ ಸಮಿತಿಯ ಒಡೆತನದಲ್ಲಿರುವ ಟಾಟಾ ಸುಮೋ ವಿಕ್ಟಾ ವಾಹನ ಸಂಖ್ಯೆ ಕೆ.ಎ-26 ಎಂ-2774 ನ್ನು ಟೆಂಡರ್-ಕಂ-ಬಹಿರಂಗ ಹರಾಜು ಮೂಲಕ ವಿಲೇವಾರಿ ಮಾಡಲು ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಆಸಕ್ತರು ಟೆಂಡರ್-ಕಂ-ಬಹಿರಂಗ ಹರಾಜಿನಲ್ಲಿ ಭಾಗವಹಿಸಲು ಸಮಿತಿಯಿಂದ ಫಾರಂ ಶುಲ್ಕ **ರೂ.500/-** ಗಳನ್ನು ಪಾವತಿಸಿ, ಫಾರ್ಮ ಪಡೆಯಲು ಕೊನೆಯ **ದಿನಾಂಕ:20-05-2026 ರ ಸಂಜೆ 4-00 ಗಂಟೆಯವರೆಗೆ,** ಭರ್ತಿ ಮಾಡಿ ಟೆಂಡರಿನಲ್ಲಿ ಅರ್ಜಿಯನ್ನು ಸೂಕ್ತ ದಾಖಲಾತಿಗಳೊಂದಿಗೆ ಹಾಗೂ ಇ.ಎಂ.ಡಿ ಮೊತ್ತ **ರೂ.12,500/-** ಗಳ ಡಿ.ಡಿ/ನಗದು ಮೂಲಕ ಪಾವತಿಸಿ ಸಲ್ಲಿಸಲು ಕೊನೆಯ **ದಿನಾಂಕ: 22-05-2026 ಮಧ್ಯಾಹ್ನ 3-00 ಗಂಟೆಯವರೆಗೆ** ಸಾಧ್ಯವಾದಲ್ಲಿ ಬಹಿರಂಗ ಹರಾಜು ಅದೇ ದಿವಸ ಮಧ್ಯಾಹ್ನ 3-30 ಗಂಟೆಗೆ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ಹಾಗೂ ಟೆಂಡರ್ ಷರತ್ತು ಮತ್ತು ನಿಬಂಧನೆಗಳಿಗಾಗಿ ರಜಾ ದಿನಗಳನ್ನು ಹೊರತುಪಡಿಸಿ ಈ ಕಚೇರಿಯ ವೇಳೆಯಲ್ಲಿ ಪಡೆಯಬಹುದಾಗಿದೆ.

ಸಹಿ/-ಕಾರ್ಯದರ್ಶಿ ಕೃ.ಉ.ಮಾ.ಸ.ಮುಂಡರಗಿ
ಸಹಿ/-ಆಡಳಿತಾಧಿಕಾರಿಗಳು ಕೃ.ಉ.ಮಾ.ಸ.ಮುಂಡರಗಿ

ವಾ.ಸಾ.ಸಂ.ಇ/ಗದಗ/48/ದೇಶಪಾಂಡೆಪಬ್ಲಿಸಿಟಿ/2026-27

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka